

Volume : 9 | Issue : 181 | October : 06 : 2026 : Tuesday
ಸಂಪುಟ : 9 | ಸಂಚಿಕೆ : 181 | ಅಕ್ಟೋಬರ್ : 06 : 2026 : ಮಂಗಳವಾರ

www.VIKRAMAVAHINI.com
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



‘ಪ್ರೇಮದ ಊರಲಿ’ ಚಿತ್ರದ ಯಶಸ್ಸಿನಿಂದ ಸಂಭ್ರಮದಲ್ಲಿರುವ ನಟಿ ರಮಿಕಾ ಶಿವು, ಚಿತ್ರದ ವಿಭಿನ್ನ ಪ್ರಚಾರ, ಸವಾಲಿನ ಪಾತ್ರ ಹಾಗೂ ಪ್ರೇಕ್ಷಕರಿಂದ ದೊರೆತ ಅಪಾರ ಮೆಚ್ಚುಗೆ ಕುರಿತು ಸಂತಸ ಹಂಚಿಕೊಂಡರು.

ಅಪರಾಧಿಗಳಲ್ಲಿ ಕಾನೂನಿನ ಭಯ ಮೂಡಿಸಿ: ಸುಪ್ರೀಂ ಪುಟ 4

‘ಫಾರ್ಮ್-7 ಅರ್ಜಿದಾರರ ವಿರುದ್ಧ ಕ್ರಿಮಿನಲ್ ಕೇಸ್ ಸಾಧ್ಯವಿಲ್ಲ’ ಪುಟ 3

# ರಾಜ್ಯದಲ್ಲಿ ಎಸ್‌ಐಆರ್ ಸಮರ!

## ಫಾರ್ಮ್–7 ಅರ್ಜಿಗಳೇ ವಿವಾದದ ಕೇಂದ್ರಬಿಂದು; ಕಾಂಗ್ರೆಸ್ ದೂರು–ಬಿಜೆಪಿ ಪ್ರತಿ ದೂರು, ಹಲವೆಡೆ ಎಫ್‌ಐಆರ್; 224 ಕ್ಷೇತ್ರಗಳಲ್ಲಿ ಪರಿಶೀಲನೆಗೆ ಚುನಾವಣಾ ಆಯೋಗ ಚುರುಕು

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದಲ್ಲಿ ಚುನಾವಣಾ ಆಯೋಗ ನಡೆಸುತ್ತಿರುವ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (SIR) ಇದೀಗ ರಾಜಕೀಯ ಸಂಘರ್ಷದ ಪ್ರಮುಖ ಅಖಾಡವಾಗಿ ಮಾರ್ಪಟ್ಟಿದೆ. ಅರ್ಹ ಮತದಾರರ ಹೆಸರುಗಳನ್ನು ಅಕ್ರಮವಾಗಿ ತೆಗೆದುಹಾಕಲು ಫಾರ್ಮ್–7 ಅರ್ಜಿಗಳನ್ನು ಸಾಮೂಹಿಕವಾಗಿ ಬಳಸಲಾಗಿದೆ ಎಂಬ ಕಾಂಗ್ರೆಸ್ ಆರೋಪಕ್ಕೆ ಬಿಜೆಪಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಮತ್ತೊಂದೆಡೆ ಫಾರ್ಮ್–7 ಸಲ್ಲಿಸಿದ ತಮ್ಮ ಕಾರ್ಯಕರ್ತರ ವಿರುದ್ಧ ಎಫ್‌ಐಆರ್ ದಾಖಲಿಸಲಾಗುತ್ತಿದೆ ಎಂದು ಬಿಜೆಪಿ ಪ್ರತಿದೂರು ನೀಡಿದೆ. ಈ ನಡುವೆ ಮತದಾರರ ಪಟ್ಟಿಯಲ್ಲಿನ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸುವುದಾಗಿ ಚುನಾವಣಾ ಆಯೋಗ ಸ್ಪಷ್ಟಪಡಿಸಿದ್ದು, ರಾಜ್ಯದ ಎಲ್ಲ 224 ವಿಧಾನಸಭಾ ಕ್ಷೇತ್ರಗಳಲ್ಲೂ ಸಾಮೂಹಿಕ ಫಾರ್ಮ್–7 ಸಲ್ಲಿಕೆ ಕುರಿತು ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.

**ಫಾರ್ಮ್–7 ಸುತ್ತ ದೊಡ್ಡ ವಿವಾದ:** SIR ಪ್ರಕ್ರಿಯೆಯ ಸಂದರ್ಭದಲ್ಲಿ ಮತದಾರರ ಹೆಸರು ಕೈಬಿಡಲು ಬಳಸುವ ಫಾರ್ಮ್–7 ಅರ್ಜಿಗಳು ಸೆಪ್ಟೆಂಬರ್ 22ರಿಂದ 24ರವರೆಗೆ ಹಲವು ಕ್ಷೇತ್ರಗಳಲ್ಲಿ ಏಕಾಏಕಿ ದೊಡ್ಡ ಪ್ರಮಾಣದಲ್ಲಿ ಸಲ್ಲಿಕೆಯಾಗಿವೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ಮೂಡಿಗೆರೆಯಲ್ಲಿ 6,259, ಬೆಳಗಾವಿ ಉತ್ತರದಲ್ಲಿ ಸುಮಾರು 3,000, ಭಾಲ್ಕಿಯಲ್ಲಿ 2,285, ಬಬಲೇಶ್ವರದಲ್ಲಿ 1,373 ಹಾಗೂ ನರಸಿಂಹರಾಜ ಕ್ಷೇತ್ರದಲ್ಲಿ ಸುಮಾರು 1,200 ಅರ್ಜಿಗಳು ಸಲ್ಲಿಕೆಯಾಗಿರುವುದನ್ನು ಅವರು ಉಲ್ಲೇಖಿಸಿದ್ದರು. ಈ ಅರ್ಜಿಗಳ ಮೂಲಕ ಅಲ್ಪಸಂಖ್ಯಾತರು, ದಲಿತರು, ಆದಿವಾಸಿಗಳು ಹಾಗೂ ಹಿಂದುಳಿದ ವರ್ಗಗಳ ಅರ್ಹ ಮತದಾರರನ್ನು ಗುರಿಯಾಗಿಸಲಾಗಿದೆ ಎಂಬುದು ಕಾಂಗ್ರೆಸ್‌ನ ಪ್ರಮುಖ ಆರೋಪವಾಗಿದೆ.

ಮುಖ್ಯಮಂತ್ರಿ ನೇತೃತ್ವದಲ್ಲಿ ಕಾಂಗ್ರೆಸ್ ನಿಯೋಗವು ರಾಜ್ಯ ಮುಖ್ಯ ಚುನಾವಣಾಧಿಕಾರಿ ಕಚೇರಿಗೆ ತೆರಳಿ, ಈ ಕುರಿತು ತಕ್ಷಣ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸುವಂತೆ ಆಗ್ರಹಿಸಿತು. ಬಳಿಕ ಡಿ.ಕೆ.ಶಿವಕುಮಾರ್ ಹಾಗೂ ಸಚಿವರು ಚುನಾವಣಾ ಆಯೋಗದ ಕಚೇರಿ ಎದುರು ಧರಣಿ ನಡೆಸಿ, ಖಖಖ ಪ್ರಕ್ರಿಯೆ ಪಾರದರ್ಶಕವಾಗಿರಬೇಕು ಮತ್ತು ಅರ್ಹ ಮತದಾರರ ಹಕ್ಕು ರಕ್ಷಿಸಬೇಕು ಎಂದು ಒತ್ತಾಯಿಸಿದರು.

**ಬಿಜೆಪಿಯಿಂದ ತಿರುಗೇಟು:** ಕಾಂಗ್ರೆಸ್ ಆರೋಪಗಳನ್ನು ಬಿಜೆಪಿ ತಳ್ಳಿಹಾಕಿದೆ. ಫಾರ್ಮ್–7 ಎಂಬುದು ಚುನಾವಣಾ ಆಯೋಗವೇ ನಿಗದಿಪಡಿಸಿರುವ ಕಾನೂನುಬದ್ಧ ಅರ್ಜಿ. ಮತದಾರರ ಪಟ್ಟಿಯಲ್ಲಿ ಅನರ್ಹ, ಸ್ಥಳಾಂತರಗೊಂಡ ಅಥವಾ ನಿಯಮಬಾಹಿರವಾಗಿ ಸೇರ್ಪಡೆಯಾಗಿರುವ ಹೆಸರುಗಳ ವಿರುದ್ಧ ಆಕ್ಷೇಪಣೆ ಸಲ್ಲಿಸಲು ಅದನ್ನು ಬಳಸಬಹುದಾಗಿದೆ ಎಂದು ಬಿಜೆಪಿ ವಾದಿಸಿದೆ.

ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ಕೇವಲ ಫಾರ್ಮ್–7 ಸಲ್ಲಿಸಿರುವುದನ್ನೇ ಅಪರಾಧವೆಂದು ಪರಿಗಣಿಸಿ ಪಕ್ಷದ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸುವುದು ಸರಿಯಲ್ಲ ಎಂದು ಹೇಳಿದ್ದಾರೆ. ತಮ್ಮ ಕಾರ್ಯಕರ್ತರ ವಿರುದ್ಧ ದಾಖಲಾಗಿರುವ ಎಫ್‌ಐಆರ್‌ಗಳನ್ನು ಪರಿಶೀಲಿಸಬೇಕು ಎಂದು ಬಿಜೆಪಿ ನಿಯೋಗವು ಪೊಲೀಸ್ ಮಹಾನಿರ್ದೇಶಕ ಎಂ.ಎ.ಸಲೀಂ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದೆ.

ಇದೇ ವೇಳೆ, SIR ಕುರಿತು ಚುನಾವಣಾ ಆಯೋಗದ ಕಚೇರಿ ಎದುರು ಧರಣಿ ನಡೆಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಸಚಿವರ ವಿರುದ್ಧವೂ ಎಫ್‌ಐಆರ್ ದಾಖಲಿಸಬೇಕೆಂದು ಬಿಜೆಪಿ ಆಗ್ರಹಿಸಿದೆ. ಸಾರ್ವಜನಿಕ ಪ್ರತಿಭಟನೆಗೆ ಸಂಬಂಧಿಸಿದ ನ್ಯಾಯಾಲಯದ ನಿಯಮಗಳನ್ನು ಸರ್ಕಾರವೂ ಪಾಲಿಸಬೇಕು ಎಂಬುದು ಬಿಜೆಪಿಯ ವಾದವಾಗಿದೆ.

**ಎಫ್‌ಐಆರ್‌ಗಳ ಸರಣಿ:** ವಿವಾದ ಕೇವಲ ರಾಜಕೀಯ ಆರೋಪ–ಪ್ರತ್ಯಾರೋಪಕ್ಕೆ ಸೀಮಿತವಾಗದೆ ಪೊಲೀಸ್ ಠಾಣೆಗಳಿಗೂ ತಲುಪಿದೆ. ಬೆಳಗಾವಿ, ಬೀದರ್, ಮೈಸೂರು, ಬಳ್ಳಾರಿ, ಭಾಲ್ಕಿ, ಬಬಲೇಶ್ವರ ಸೇರಿದಂತೆ ವಿವಿಧೆಡೆ ಫಾರ್ಮ್–7 ಅರ್ಜಿಗಳ ದುರ್ಬಳಕೆಯ ಆರೋಪಗಳ ಕುರಿತು ಪ್ರಕರಣಗಳು ದಾಖಲಾಗಿವೆ. ಬೆಳಗಾವಿಯಲ್ಲಿ ಬಿಜೆಪಿ ಮುಖಂಡ ರವಿ ಪಾಟೀಲ್ ಸೇರಿದಂತೆ ಕೆಲವರ ವಿರುದ್ಧ 198 ಅಲ್ಪಸಂಖ್ಯಾತ ಮತದಾರರ ಹೆಸರುಗಳನ್ನು ತೆಗೆದುಹಾಕಲು ಯತ್ನಿಸಿದ ಆರೋಪದಲ್ಲಿ ಎಫ್‌ಐಆರ್ ದಾಖಲಾಗಿದೆ. ಈ ಆರೋಪಗಳು ತನಿಖೆಯ ಹಂತದಲ್ಲಿದ್ದು, ಇನ್ನೂ ಸಾಬೀತಾಗಿಲ್ಲ. ಬೆಂಗಳೂರಿನ ಮಲ್ಲೇಶ್ವರಂ ವಿಧಾನಸಭಾ ಕ್ಷೇತ್ರದಲ್ಲೂ 778 ಮತದಾರರ ಹೆಸರುಗಳನ್ನು ತೆಗೆದುಹಾಕಲು ಫಾರ್ಮ್–7 ಅರ್ಜಿಗಳನ್ನು ಸಲ್ಲಿಸಲಾಗಿದೆ ಎಂಬ ದೂರಿನ ಆಧಾರದ ಮೇಲೆ ಎಫ್‌ಐಆರ್ ದಾಖಲಾಗಿದೆ. 3ನೇ ಪುಟಕ್ಕೆ...

## “ಫಾರ್ಮ್-6 ಬದಲಾವಣೆ ಅನುಮೋದಿಸಿಲ್ಲ”

● ವಿಕ್ರಮ ವಾಹಿನಿ । ನವದೆಹಲಿ

ಮತದಾರರ ಪಟ್ಟಿಗೆ ಹೊಸ ಮತದಾರರ ಸೇರ್ಪಡೆಗೆ ಬಳಸುವ ಫಾರ್ಮ್–6ರಲ್ಲಿ ಯಾವುದೇ ಬದಲಾವಣೆಯನ್ನು ತಾವು ಅನುಮೋದಿಸಿಲ್ಲ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಸಂದರ್ಭದಲ್ಲಿ ಆನ್‌ಲೈನ್ ಫಾರ್ಮ್–6ರಲ್ಲಿ ಮಾಡಿರುವ ಬದಲಾವಣೆಗಳ ಕುರಿತು ಸಲ್ಲಿಕೆಯಾಗಿರುವ ಅರ್ಜಿಯ ವಿಚಾರಣೆ ವೇಳೆ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಹಾಗೂ ವಿ.ಮೋಹನ್ ಅವರನ್ನೊಳಗೊಂಡ ಪೀಠವು ಅರ್ಜಿಯ ವಿಚಾರಣೆ ನಡೆಸಿತು. ಎಸ್‌ಐಆರ್ ಸಂದರ್ಭದಲ್ಲಿ ಫಾರ್ಮ್–6ರ ಆನ್‌ಲೈನ್ ಆವೃತ್ತಿಯಲ್ಲಿ ಅರ್ಜಿದಾರರ ಪೋಷಕರು ಅಥವಾ ಅಜ್ಜ–ಅಜ್ಜಿಯರ ಹೆಸರು ಹಿಂದಿನ ಮತದಾರರ ಪಟ್ಟಿಯಲ್ಲಿತ್ತೇ ಎಂಬ ಮಾಹಿತಿ ಹಾಗೂ ಘೋಷಣೆಯನ್ನು ಸೇರಿಸಲಾಗಿದೆ ಎಂದು ಅರ್ಜಿದಾರರ ಪರ ವಕೀಲರು ನ್ಯಾಯಾಲಯದ ಗಮನಕ್ಕೆ ತಂದರು.



ಈ ಕುರಿತು ಪ್ರತಿಕ್ರಿಯಿಸಿದ ಸಿಜೆಐ ಸೂರ್ಯಕಾಂತ್, “ನಾವು ಬದಲಾದ ಯಾವುದೇ ಫಾರ್ಮ್–6 ಅನ್ನು ಅನುಮೋದಿಸಿಲ್ಲ. ದಾಖಲೆಗಳು ಬಂದ ಬಳಿಕ ಬದಲಾವಣೆಗಳನ್ನು ಯಾರು ಮಾಡಿದ್ದಾರೆ ಎಂಬುದನ್ನು ಪರಿಶೀಲಿಸುತ್ತೇವೆ” ಎಂದು ತಿಳಿಸಿದರು. ಈ ಸಂಬಂಧ ಚುನಾವಣಾ ಆಯೋಗಕ್ಕೆ ನ್ಯಾಯಾಲಯ ನೋಟಿಸ್ ನೀಡಿದೆ.

### ಏನಿದು ವಿವಾದ?

ಜುಲೈನಲ್ಲಿ ಫಾರ್ಮ್–6ರ ಆನ್‌ಲೈನ್ ಆವೃತ್ತಿಗೆ ಹೊಸ ವಿಭಾಗ ಸೇರ್ಪಡೆ ಮಾಡಲಾಗಿದ್ದು, ಅರ್ಜಿದಾರರು ಅಥವಾ ಅವರ ಪೋಷಕರು, ಅಜ್ಜ–ಅಜ್ಜಿಯರ ಹೆಸರು ಹಿಂದಿನ ಎಸ್‌ಐಆರ್‌ನಲ್ಲಿ ಸಿದ್ಧಪಡಿಸಿದ ಮತದಾರರ ಪಟ್ಟಿಯಲ್ಲಿತ್ತೇ ಎಂಬುದನ್ನು ಘೋಷಿಸಬೇಕಾಗಿತ್ತು.

ಈ ಬದಲಾವಣೆಗೆ ಚುನಾವಣಾ ಆಯೋಗದೊಳಗೇ ಆಕ್ಷೇಪ ವ್ಯಕ್ತವಾಗಿತ್ತು ಎಂದು ವರದಿಯಾಗಿದೆ. ಸುಪ್ರೀಂ ಕೋರ್ಟ್‌ನ ಹೇಳಿಕೆ ಬಳಿಕ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ‘ಫಾರ್ಮ್–6’ ಅನ್ನು ಅಕ್ರಮವಾಗಿ ಮತ್ತು ಏಕಪಕ್ಷೀಯವಾಗಿ ಬದಲಾಯಿಸಿದ್ದಾರೆ ಎಂದು ಆರೋಪಿಸಿದರು.

ಇದು ಪ್ರಜಾಪ್ರಭುತ್ವದ ಮೇಲಿನ ದಾಳಿ ಎಂದು ಬಣ್ಣಿಸಿದ ಅವರು, ಇದಕ್ಕೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಹೇಳಿದರು.

## ‘ಇಂದು ಠಾಣೆಗಳಿಗೆ ಮುತ್ತಿಗೆ’

### ಎಸ್‌ಐಆರ್ ಹೆಸರಿನಲ್ಲಿ ಬಿಜೆಪಿ–ಜೆಡಿಎಸ್ ಕಾರ್ಯಕರ್ತರಿಗೆ ಕಿರುಕುಳ ನಿಲ್ಲಿಸಿ; ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ಎಸ್‌ಐಆರ್ ವಿಚಾರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರ ವಿರುದ್ಧ ಸುಳ್ಳು ದೂರು ದಾಖಲಿಸಿ ಪೊಲೀಸ್ ದಬ್ಬಾಳಿಕೆ ನಡೆಸುವುದನ್ನು ತಕ್ಷಣ ನಿಲ್ಲಿಸಬೇಕು. ಇಲ್ಲದಿದ್ದರೆ ನಾಳೆ (ಮಂಗಳವಾರ) ಬೆಳಿಗ್ಗೆ 10 ಗಂಟೆಯ ಬಳಿಕ ರಾಜ್ಯದ ಎಲ್ಲ ಪೊಲೀಸ್ ಠಾಣೆಗಳಿಗೆ ಮುತ್ತಿಗೆ ಹಾಕುವ ಚಳವಳಿ ನಡೆಸಲಾಗುವುದು ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಇಂದು ಎಚ್ಚರಿಕೆ ನೀಡಿದರು.

ರಾಜ್ಯ ಸರ್ಕಾರ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಅನಗತ್ಯ ಹಸ್ತಕ್ಷೇಪ ಮಾಡುತ್ತಿದ್ದು, ಅಧಿಕಾರ ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿದ ಅವರು, ಇಂದು ಎನ್‌ಡಿಎ ನಾಯಕರೊಂದಿಗೆ ರಾಜ್ಯ ಮುಖ್ಯ ಚುನಾವಣಾಧಿಕಾರಿಯನ್ನು ಭೇಟಿ ಮಾಡಿ ದೂರು ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಫಾರ್ಮ್–7 ಸಲ್ಲಿಕೆ ಕಾನೂನುಬಾಹಿರವಲ್ಲ ಎಂಬುದನ್ನು ನ್ಯಾಯಾಲಯವೇ ಸ್ಪಷ್ಟಪಡಿಸಿದೆ. ಆದರೂ ಕಾರ್ಯಕರ್ತರ ವಿರುದ್ಧ ಪ್ರಕರಣ ದಾಖಲಿಸಿ ಬಂಧಿಸುವ ಮೂಲಕ ಪೊಲೀಸ್ ಇಲಾಖೆಯನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ನೈಸ್, ಬಿಡದಿ ಟೌನ್‌ಶಿಪ್ ಹಾಗೂ ಕೆಪಿಎಸ್‌ಸಿ ಅಕ್ರಮಗಳಂತಹ ವಿಚಾರಗಳಿಂದ ಜನರ ಗಮನ ಬೇರೆಡೆ ಸೆಳೆಯಲು ಸರ್ಕಾರ ಈ ರಾಜಕೀಯ ನಾಟಕ ನಡೆಸುತ್ತಿದೆ ಎಂದು ದೂರಿದರು.



ಪೊಲೀಸ್ ಇಲಾಖೆ ಕಾನೂನುಬದ್ಧವಾಗಿ ಕಾರ್ಯನಿರ್ವಹಿಸುವಂತೆ ಐಜಿಪಿ, ಡಿಜಿಪಿ ಹಾಗೂ ನಗರ ಪೊಲೀಸ್ ಆಯುಕ್ತರು ಅಧೀನ ಅಧಿಕಾರಿಗಳಿಗೆ ಸ್ಪಷ್ಟ ಸೂಚನೆ ನೀಡಬೇಕು. ಕಿರುಕುಳ ಮುಂದುವರಿದರೆ ಕೈಕಟ್ಟಿ ಕೂರುವುದಿಲ್ಲ.

## ನೈಸ್ ವಿವಾದ: ನ.2ಕ್ಕೆ ವಿಚಾರಣೆ ಮುಂದಕ್ಕೆ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು–ಮೈಸೂರು ಮೂಲಸೌಕರ್ಯ ಕಾರಿಡಾರ್ (ಬಿಎಂಐಸಿ)–ನೈಸ್ ಯೋಜನೆಗೆ ಸಂಬಂಧಿಸಿದ ಕೆಐಎಡಿಬಿಯ ಭೂಸ್ವಾಧೀನ ಪ್ರಕ್ರಿಯೆ ಹಾಗೂ ಅಕ್ರಮಗಳ ಕುರಿತು ಕರ್ನಾಟಕ ಹೈಕೋರ್ಟ್ ನೀಡಿರುವ ಆದೇಶಕ್ಕೆ ಮಧ್ಯಂತರ ತಡೆ ನೀಡಲು ಸುಪ್ರೀಂ ಕೋರ್ಟ್ ಸೋಮವಾರ ನಿರಾಕರಿಸಿದೆ.

ಹೈಕೋರ್ಟ್ ಆದೇಶ ಪ್ರಶ್ನಿಸಿ ನೈಸ್ ಸಂಸ್ಥೆ ಸಲ್ಲಿಸಿದ್ದ ಮೇಲ್ಮನವಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್, ವಿಚಾರಣೆ ಪೂರ್ಣಗೊಳ್ಳುವವರೆಗೆ ಆದೇಶಕ್ಕೆ ತಡೆ ನೀಡಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿ, ಪ್ರಕರಣದ ಮುಂದಿನ ವಿಚಾರಣೆಯನ್ನು ನವೆಂಬರ್ 2ಕ್ಕೆ ಮುಂದೂಡಿತು.

ಜುಲೈನಲ್ಲಿ ಹೈಕೋರ್ಟ್ ವಿಭಾಗೀಯ ಪೀಠವು ಬಿಎಂಐಸಿ ಯೋಜನೆಯಲ್ಲಿನ ಭೂಸ್ವಾಧೀನ ಮತ್ತು ಅನುಷ್ಠಾನದ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿತ್ತು.

ಸುಪ್ರೀಂ ಕೋರ್ಟ್ ಆದೇಶ ಹಾಗೂ ಫ್ರೇಮ್‌ವರ್ಕ್ ಒಪ್ಪಂದ ಉಲ್ಲಂಘಿಸಿ 20 ಸಾವಿರ ಎಕರೆಗೂ ಅಧಿಕ ಭೂಮಿ ವಶಪಡಿಸಿಕೊಂಡಿರುವ ಆರೋಪಗಳ ಹಿನ್ನೆಲೆಯಲ್ಲಿ ಸ್ವತಂತ್ರ ತಜ್ಞರ ತಂಡದಿಂದ ತನಿಖೆ ಹಾಗೂ ಫೊರೆನ್ಸಿಕ್ ಆಡಿಟ್ ನಡೆಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶಿಸಿತ್ತು.

ಯೋಜನೆಯಡಿ 111 ಕಿ.ಮೀ. ರಸ್ತೆ ನಿರ್ಮಾಣದ ಗುರಿ ಇದ್ದರೂ ಹಲವು ವರ್ಷಗಳ ಬಳಿಕವೂ ಕಾಮಗಾರಿ ನಿರೀಕ್ಷಿತ ಪ್ರಮಾಣದಲ್ಲಿ ಪೂರ್ಣಗೊಂಡಿಲ್ಲ. ಭೂಮಿ ಕಳೆದುಕೊಂಡ ರೈತರಿಗೆ ಸೂಕ್ತ ಪರಿಹಾರ ನೀಡದಿರುವುದು ಸೇರಿದಂತೆ ಹಲವು ವಿಚಾರಗಳು ವಿವಾದಕ್ಕೆ ಕಾರಣವಾಗಿವೆ. ಹೈಕೋರ್ಟ್ ಆದೇಶಕ್ಕೆ ತಡೆ ನಿರಾಕರಣೆಯಾಗಿರುವುದು ತನಿಖೆ ಹಾಗೂ ಮುಂದಿನ ಕಾನೂನು ಪ್ರಕ್ರಿಯೆಗಳು ಮುಂದುವರಿಯಲು ಅವಕಾಶ ನೀಡಿದಂತಾಗಿದೆ.

ನೈಸ್ ಸಂಸ್ಥೆಯ ಮೇಲ್ಮನವಿಯ ಕುರಿತು ನ.2ರಂದು ಸುಪ್ರೀಂ ಕೋರ್ಟ್‌ನಲ್ಲಿ ಮತ್ತಷ್ಟು ವಿಚಾರಣೆ ನಡೆಯಲಿದ್ದು, ಭೂಸ್ವಾಧೀನ, ಪರಿಹಾರ, ಯೋಜನೆಯ ಅನುಷ್ಠಾನ ಹಾಗೂ ಹೈಕೋರ್ಟ್ ನಿರ್ದೇಶನಗಳ ಕಾನೂನುಬದ್ಧತೆ ಸೇರಿದಂತೆ ಹಲವು ಅಂಶಗಳು ಪರಿಶೀಲನೆಗೆ ಒಳಪಡಲಿವೆ.

## ಜ್ಞಾನೇಶ್ ಕುಮಾರ್ ಅಮಾನತಿಗೆ ಸುಪ್ರೀಂ ನಕಾರ

● ವಿಕ್ರಮ ವಾಹಿನಿ । ನವದೆಹಲಿ

ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರನ್ನು ಅಮಾನತುಗೊಳಿಸುವಂತೆ ಮಧ್ಯಂತರ ಆದೇಶ ನೀಡಲು ಸುಪ್ರೀಂ ಕೋರ್ಟ್ ಸೋಮವಾರ ನಿರಾಕರಿಸಿದೆ. ಆದರೆ, ಇತರ ಚುನಾವಣಾ ಆಯುಕ್ತರ ಅನುಮೋದನೆಯಿಲ್ಲದೆ ಸಿಇಸಿ ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದ್ದಾರೆ ಎಂಬ ಆರೋಪದ ಕುರಿತು ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗಕ್ಕೆ ನೋಟಿಸ್ ಜಾರಿಗೊಳಿಸಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ಪೀಠವು ನೋಟಿಸ್‌ಗೆ ಒಂದು



ವಾರದೊಳಗೆ ಉತ್ತರಿಸುವಂತೆ ಸೂಚಿಸಿದೆ. ಪಾಟ್ನಾ ನಿವಾಸಿ ರಾಕೇಶ್ ಕುಮಾರ್ ಸಿಂಗ್ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯಲ್ಲಿ, ಸಿಇಸಿ ಸಂಪೂರ್ಣ ಆಯೋಗಕ್ಕೆ ಸೇರಿದ ಅಧಿಕಾರವನ್ನು ವೈಯಕ್ತಿಕವಾಗಿ ಚಲಾಯಿಸಿದ್ದಾರೆಯೇ ಎಂಬುದನ್ನು ಪರಿಶೀಲಿಸುವಂತೆ ಕೋರಲಾಗಿದೆ.

ಅರ್ಜಿಯಲ್ಲಿ, ಪ್ರಕರಣದ ಅಂತಿಮ ತೀರ್ಪಿನವರೆಗೆ ಜ್ಞಾನೇಶ್ ಕುಮಾರ್ ಅವರು ಸಿಇಸಿ ಆಗಿ ಕಾರ್ಯನಿರ್ವಹಿಸದಂತೆ ತಡೆಯಬೇಕು ಹಾಗೂ ಚುನಾವಣಾ ಆಯೋಗದ ಕಾರ್ಯಕಲಾಪಗಳನ್ನು ಇತರ ಇಬ್ಬರು ಆಯುಕ್ತರ ಸಮ್ಮತಿಯೊಂದಿಗೆ ನಡೆಸುವಂತೆ ನಿರ್ದೇಶಿಸಬೇಕು ಎಂದು ಮನವಿ ಮಾಡಲಾಗಿದೆ. ಕಳೆದ 10 ತಿಂಗಳಲ್ಲಿ ತಮ್ಮ ಗಮನಕ್ಕೆ ಬಾರದೆ ಹೊರಡಿಸಲಾದ ನಿರ್ಧಾರಗಳ ಕುರಿತು ಇಬ್ಬರು ಆಯುಕ್ತರು ಹಲವು ಬಾರಿ ಆಕ್ಷೇಪಣೆ ಸಲ್ಲಿಸಿರುವುದಾಗಿ ವರದಿಯಾಗಿದೆ. ಆದರೆ, ಆಯೋಗವು ತನ್ನ ಎಲ್ಲಾ ಆದೇಶಗಳು ಕಾನೂನುಬದ್ಧ ಪ್ರಕ್ರಿಯೆಯಂತೆ ಹೊರಡಿಸಲಾಗಿದೆ ಎಂದು ಸ್ಪಷ್ಟಪಡಿಸಿದೆ.

## ನಕಲಿ ಸುಪ್ರೀಂ ಕೋರ್ಟ್ ಆದೇಶ ಪ್ರಕರಣ: ಜೈಲು ಡಿಐಜಿ ಬಂಧನ

● ವಿಕ್ರಮ ವಾಹಿನಿ । ಬೆಂಗಳೂರು

ಜೀವಾವಧಿ ಶಿಕ್ಷೆಗೆ ಗುರಿಯಾಗಿದ್ದ ಕೈದಿಯೊಬ್ಬನನ್ನು ಸುಪ್ರೀಂ ಕೋರ್ಟ್‌ನ ನಕಲಿ ಆದೇಶ ಸೃಷ್ಟಿಸಿ ಬಿಡುಗಡೆ ಮಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಜೈಲು ಡಿಐಜಿ ಸೋಮಶೇಖರ್ ಅವರನ್ನು ಪರಪ್ಪನ ಅಗ್ರಹಾರ ಪೊಲೀಸರು ಬಂಧಿಸಿದ್ದಾರೆ. 2001ರಲ್ಲಿ ಕೊಲೆ, ಅಪಹರಣ ಹಾಗೂ ಸುಲಿಗೆ ಪ್ರಕರಣದಲ್ಲಿ ಬಂಧಿತನಾಗಿದ್ದ ಶಂಕರ್‌ಗೆ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿತ್ತು. ಬಳಿಕ 2018ರಲ್ಲಿ ಸುಪ್ರೀಂ ಕೋರ್ಟ್‌ನಲ್ಲಿ ಕ್ರಿಮಿನಲ್ ಮೇಲ್ಮನವಿ ಸಲ್ಲಿಕೆಯಾಗಿದ್ದು, ಬಿಡುಗಡೆ ಆದೇಶ ನೀಡಲಾಗಿದೆ ಎಂದು ನಕಲಿ ದಾಖಲೆ ಸೃಷ್ಟಿಸಿ ಜೈಲು ಅಧಿಕಾರಿಗಳಿಗೆ ಸಲ್ಲಿಸಲಾಗಿತ್ತು.

ಈ ಆಧಾರದಲ್ಲಿ ಶಂಕರ್‌ನನ್ನು ಬಿಡುಗಡೆ ಮಾಡಲಾಗಿತ್ತು ಎನ್ನಲಾಗಿದೆ. ಜೈಲಿನ ಎಸ್‌ಡಿಎ ಆಗಿದ್ದ ಶ್ರೀಕಾಂತ್ ಎಸ್. ನಕಲಿ ಸುಪ್ರೀಂ ಕೋರ್ಟ್ ಆದೇಶ ಸೃಷ್ಟಿಸಿದ್ದಾನೆ ಎಂಬ ಆರೋಪ ಕೇಳಿಬಂದಿದ್ದು, ಪ್ರಕರಣದಲ್ಲಿ ಕೈದಿ ಶಂಕರ್ ಹಾಗೂ ಶ್ರೀಕಾಂತ್ ಅವರನ್ನು ಪೊಲೀಸರು ಈಗಾಗಲೇ ಬಂಧಿಸಿದ್ದರು. ನಕಲಿ ಆದೇಶದ ಆಧಾರದಲ್ಲಿ ಕೈದಿಯನ್ನು ಬಿಡುಗಡೆ ಮಾಡುವಲ್ಲಿ ಡಿಐಜಿ ಸೋಮಶೇಖರ್ ಅವರ ಪಾತ್ರವಿದೆಯೇ ಎಂಬುದನ್ನು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಪ್ರಕರಣದ ಮುಂದಿನ ತನಿಖೆ ಮುಂದುವರಿದಿದೆ.

## ‘ಹಿಂದಿ ಕಲಿತು ಬಾ, ಇಲ್ಲ ಕೆಲಸ ಬಿಡು’ ಎಂದಿದ್ದ ಹಿಂದಿ ವಾಲಾನಿಂದ ಕ್ಷಮೆಯಾಚನೆ

ನೆಲಮಂಗಲದ ಖಾಸಗಿ ಗೋದಾಮಿನಲ್ಲಿ ಕನ್ನಡ ಕಾರ್ಮಿಕರಿಗೆ ‘ಹಿಂದಿ ಕಲಿತು ಕೆಲಸಕ್ಕೆ ಬನ್ನಿ, ಇಲ್ಲವಾದರೆ ಕೆಲಸ ಬಿಟ್ಟು ಹೋಗಿ’ ಎಂದು ಹೇಳಿದ್ದಾನೆ ಎನ್ನಲಾದ ಮೇಲ್ವಿಚಾರಕನ ವಿಡಿಯೊ ವೈರಲ್ ಆಗಿ ಆಕ್ರೋಶಕ್ಕೆ ಕಾರಣವಾಗಿದೆ. ಬಳಿಕ ಆರೋಪಿ ಕೈಮುಗಿದು ಕನ್ನಡಿಗರಲ್ಲಿ ಕ್ಷಮೆಯಾಚಿಸಿದ್ದಾನೆ.

● ವಿಕ್ರಮ ವಾಹಿನಿ । ಬೆಂಗಳೂರು

ಕನ್ನಡ ಕಾರ್ಮಿಕರಿಗೆ ‘ಹಿಂದಿ ಕಲಿತು ಕೆಲಸಕ್ಕೆ ಬನ್ನಿ, ಇಲ್ಲವಾದರೆ ಕೆಲಸ ಬಿಟ್ಟು ಹೋಗಿ’ ಎಂದು ಬೆದರಿಕೆ ಹಾಕಿದ್ದಾರೆ ಎನ್ನಲಾದ ಖಾಸಗಿ ಗೋದಾಮಿನ ಮೇಲ್ವಿಚಾರಕನ ವಿಡಿಯೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ವ್ಯಾಪಕ ಆಕ್ರೋಶ ವ್ಯಕ್ತವಾಗಿದೆ. ಬಳಿಕ ಆ ವ್ಯಕ್ತಿ ಕೈಮುಗಿದು ಕನ್ನಡಿಗರಲ್ಲಿ ಕ್ಷಮೆಯಾಚಿಸಿರುವ ವಿಡಿಯೊವೂ ಹರಿದಾಡುತ್ತಿದೆ.

ನೆಲಮಂಗಲ ಸಮೀಪದ ಹುಸ್ಕೂರು ರಸ್ತೆಯ ಖಾಸಗಿ ಗೋದಾಮಿನಲ್ಲಿ ರಾತ್ರಿ ಪಾಳಿಯಲ್ಲಿ ಕೆಲಸ ಮಾಡುತ್ತಿದ್ದ ಕನ್ನಡ ಕಾರ್ಮಿಕರಿಗೆ ಮೇಲ್ವಿಚಾರಕ ಅಶೋಕ್ ಎಂಬಾತ ಹಿಂದಿಯಲ್ಲೇ ಮಾತನಾಡುವಂತೆ ಒತ್ತಾಯಿಸಿ, ಕನ್ನಡದಲ್ಲಿ ಮಾತನಾಡುವವರು ಕೆಲಸ ಬಿಟ್ಟು ಹೋಗಬಹುದು ಎಂದು ಹೇಳಿದ್ದಾನೆ ಎನ್ನಲಾಗಿದೆ. ಈ ಮಾತುಕತೆಯ ವಿಡಿಯೊ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿ ಚರ್ಚೆಗೆ ಕಾರಣವಾಗಿದೆ.

**ಗೋದಾಮಿಗೆ ಮುತ್ತಿಗೆ ಯತ್ನ:** ವಿಡಿಯೊ ವೈರಲ್ ಆಗುತ್ತಿದ್ದಂತೆ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಗೋದಾಮಿನ ಬಳಿ ಪ್ರತಿಭಟನೆ ನಡೆಸಿ, ಸಂಬಂಧಪಟ್ಟ ವ್ಯಕ್ತಿಯನ್ನು ಕೆಲಸದಿಂದ ವಜಾಗೊಳಿಸಿ ಕನ್ನಡಿಗರಲ್ಲಿ ಕ್ಷಮೆ ಕೇಳುವಂತೆ ಆಗ್ರಹಿಸಿದರು.

ಸ್ಥಳಕ್ಕೆ ಬಂದ ಪೊಲೀಸರು ಅಶೋಕ್‌ನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

**ಕೈಮುಗಿದು ಕ್ಷಮೆ:** ವ್ಯಾಪಕ ಆಕ್ರೋಶದ ಬೆನ್ನಲ್ಲೇ ಅಶೋಕ್ ವಿಡಿಯೊ ಮೂಲಕ ಕನ್ನಡಿಗರಲ್ಲಿ ಕ್ಷಮೆಯಾಚಿಸಿದ್ದಾನೆ. ತನ್ನಿಂದ ತಪ್ಪಾಗಿದೆ, ಇನ್ನು ಮುಂದೆ ಇಂತಹ ಘಟನೆ ಮರುಕಳಿಸದಂತೆ ನೋಡಿಕೊಳ್ಳುತ್ತೇನೆ ಎಂದು ಕೈಮುಗಿದು ಕ್ಷಮೆ ಕೋರಿದ್ದಾನೆ.

ಕನ್ನಡಪರ ಹೋರಾಟಗಾರ ರೂಪೇಶ್ ರಾಜಣ್ಣ ಸೇರಿದಂತೆ ಹಲವರು ಘಟನೆಯನ್ನು ಖಂಡಿಸಿ, ಕನ್ನಡಿಗರನ್ನು ಅವಮಾನಿಸಿದ ಆರೋಪ ಎದುರಿಸುತ್ತಿರುವ ವ್ಯಕ್ತಿಯ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

## ■ ಸುದ್ದಿ ಚುಟುಕು

### ಫ್ಲೈದುಬೈ ಘಟನೆ ಬೆನ್ನಲ್ಲೇ ಮತ್ತೊಂದು ವಿಮಾನದಲ್ಲಿ ತುರ್ತು ಭೂ ಸ್ಪರ್ಶ

● ವಿಕ್ರಮ ವಾಹಿನಿ । ಲಂಡನ್

ಲಂಡನ್‌ನಿಂದ ಚಿಕಾಗೋಗೆ ತೆರಳುತ್ತಿದ್ದ ಬ್ರಿಟಿಷ್ ಏರ್‌ವೇಸ್‌ನ ಃ೦295 ವಿಮಾನ ಐರ್ಲೆಂಡ್ ಮೇಲೆ ತುರ್ತು ಪರಿಸ್ಥಿತಿ ಘೋಷಿಸಿ ಲಂಡನ್‌ಗೆ ವಾಪಸ್ ತೆರಳಿದೆ ಎಂದು ವಿಮಾನ ಟ್ರ್ಯಾಕಿಂಗ್ ಮಾಹಿತಿ ತಿಳಿಸಿದೆ. ವಿಮಾನವು ಸಾಮಾನ್ಯ ತುರ್ತು ಪರಿಸ್ಥಿತಿಯನ್ನು ಸೂಚಿಸುವ ‘ಸ್ಕ್ವಾಕ್ 7700’ ಸಂಕೇತವನ್ನು ರವಾನಿಸಿದ್ದು, ಸುಮಾರು 9,000 ಅಡಿ ಎತ್ತರಕ್ಕೆ ದಿಢೀರ್ ಇಳಿದಿದೆ. ತುರ್ತು ಪರಿಸ್ಥಿತಿಗೆ ಕಾರಣವೇನು ಎಂಬುದು ತಕ್ಷಣಕ್ಕೆ ತಿಳಿದುಬಂದಿಲ್ಲ.

‘ಸ್ಕ್ವಾಕ್ 7700’ ಸಂಕೇತವನ್ನು ವಿಮಾನದಲ್ಲಿ ಸಾಮಾನ್ಯ ತುರ್ತು ಪರಿಸ್ಥಿತಿ ಎದುರಾದಾಗ ವಾಯು ಸಂಚಾರ ನಿಯಂತ್ರಣಕ್ಕೆ ಮಾಹಿತಿ ನೀಡಲು ಬಳಸಲಾಗುತ್ತದೆ. ಆದರೆ ಈ ಸಂಕೇತವು ತುರ್ತು ಪರಿಸ್ಥಿತಿಯ ನಿರ್ದಿಷ್ಟ ಕಾರಣವನ್ನು ಸೂಚಿಸುವುದಿಲ್ಲ.

ಇತ್ತೀಚೆಗೆ ಫ್ಲೈದುಬೈ ವಿಮಾನದಲ್ಲಿ ತುರ್ತು ಪರಿಸ್ಥಿತಿ ಉಂಟಾದ ಘಟನೆ ಬೆನ್ನಲ್ಲೇ ಈ ಬೆಳವಣಿಗೆ ವರದಿಯಾಗಿದೆ. ಸೆ.30ರಂದು ಟೆಲ್ ಅವೀವ್‌ಗೆ ತೆರಳುತ್ತಿದ್ದ ಫ್ಲೈದುಬೈ FZ1073 ವಿಮಾನ ತುರ್ತು ಸಂಕೇತ ರವಾನಿಸಿ ಸೌದಿ ಅರೇಬಿಯಾದ ತಬೂಕ್‌ಗೆ ತಿರುಗಿತ್ತು.

### ಪ್ರತಿಭಟನೆ ವೇಳೆ ಸಿಐಎಸ್‌ಎಫ್ ಯೋಧನಿಗೆ ಚಾಕು ಇರಿತ

● ವಿಕ್ರಮ ವಾಹಿನಿ । ನವದೆಹಲಿ

ದೆಹಲಿ ಜಿಲ್ಲೆಯಲ್ಲಿ ಸೋಮವಾರ ನಡೆದ ಪ್ರತಿಭಟನೆ ವೇಳೆ ಕೇಂದ್ರೀಯ ಕೈಗಾರಿಕಾ ಭದ್ರತಾ ಪಡೆಯ (ಸಿಐಎಸ್‌ಎಫ್) ಯೋಧರೊಬ್ಬರಿಗೆ ಹರಿತವಾದ ವಸ್ತುವಿನಿಂದ ಇರಿದಿರುವ ಘಟನೆ ನಡೆದಿದೆ.

ಪ್ರತಿಭಟನಾ ಸ್ಥಳದಲ್ಲಿ ಕರ್ತವ್ಯದಲ್ಲಿದ್ದ ಯೋಧನಿಗೆ ವ್ಯಕ್ತಿಯೊಬ್ಬರು ಹರಿತವಾದ ವಸ್ತುವಿನಿಂದ ಇರಿದಿದ್ದಾರೆ ಎಂದು ಆರೋಪಿಸಲಾಗಿದೆ. ಘಟನೆಯಲ್ಲಿ ಗಾಯಗೊಂಡ ಯೋಧರನ್ನು ತಕ್ಷಣ ಆಸ್ಪತ್ರೆಗೆ ಕರೆದೊಯ್ದು ವೈದ್ಯಕೀಯ ತಪಾಸಣೆ ನಡೆಸಲಾಗಿದೆ. ಅವರ ಆರೋಗ್ಯದ ಕುರಿತು ಹೆಚ್ಚಿನ ಮಾಹಿತಿ ಲಭ್ಯವಾಗಿಲ್ಲ.

ಘಟನೆಯ ಮಾಹಿತಿ ಪಡೆದ ದೆಹಲಿ ಪೊಲೀಸರು ಸ್ಥಳಕ್ಕೆ ತೆರಳಿ ಪರಿಸ್ಥಿತಿಯನ್ನು ಪರಿಶೀಲಿಸಿದ್ದಾರೆ. ಯೋಧನ ಮೇಲೆ ಹಲ್ಲೆ ನಡೆದ ಸಂದರ್ಭ ಹಾಗೂ ಅದರ ಹಿಂದಿನ ಕಾರಣಗಳ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ಕಾನೂನು ಕ್ರಮ: ಘಟನೆಯ ಸಂಪೂರ್ಣ ಸನ್ನಿವೇಶವನ್ನು ಪರಿಶೀಲಿಸಿದ ಬಳಿಕ ಸಂಬಂಧಪಟ್ಟವರ ವಿರುದ್ಧ ಅಗತ್ಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪ್ರತಿಭಟನೆಯ ಸಂದರ್ಭದಲ್ಲಿ ಭದ್ರತಾ ಸಿಬ್ಬಂದಿಯ ಮೇಲೆ ಹಲ್ಲೆ ನಡೆದಿರುವ ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದಾರೆ.

### ವಿಐಎಸ್‌ಎಲ್ ಡಿಜಿಎಂ ಆತ್ಮಹತ್ಯೆ

● ವಿಕ್ರಮ ವಾಹಿನಿ । ಶಿವಮೊಗ್ಗ

ಭದ್ರಾವತಿಯ ವಿಶ್ವೇಶ್ವರಯ್ಯ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆ (ವಿಐಎಸ್‌ಎಲ್)ಯ ಎಲೆಕ್ಟ್ರಿಕಲ್ ವಿಭಾಗದ ಡೆಪ್ಯುಟಿ ಜನರಲ್ ಮ್ಯಾನೇಜರ್ ಗೋವಿಂದರಾಜ್ (51) ಅವರು ಆತ್ಮಹತ್ಯೆಗೆ ಶರಣಾಗಿರುವ ಘಟನೆ ನಡೆದಿದೆ.

ತಮಿಳುನಾಡಿನ ಸೇಲಂ ಮೂಲದ ಗೋವಿಂದರಾಜ್ ಅವರು ಕಳೆದ 13 ವರ್ಷಗಳಿಂದ ವಿಐಎಸ್‌ಎಲ್‌ನಲ್ಲಿ ಸೇವೆ ಸಲ್ಲಿಸುತ್ತಿದ್ದರು. ಭಾನುವಾರ ಪತ್ನಿ ಹಾಗೂ ಮಕ್ಕಳನ್ನು ಸೇಲಂಗೆ ಕಳುಹಿಸಿದ ಬಳಿಕ ಭದ್ರಾವತಿಯ ಸೇಂಟ್ ಚಾರ್ಲ್ಸ್ ಶಾಲೆ ಎದುರಿನ ವಿಐಎಸ್‌ಎಲ್ ಅಧಿಕಾರಿಗಳ ಕ್ವಾಟ್ರಸ್‌ನಲ್ಲಿರುವ ಮನೆಯಲ್ಲಿ ಒಬ್ಬರೇ ಇದ್ದರು ಎನ್ನಲಾಗಿದೆ. ರಾತ್ರಿ ವೇಳೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಸೋಮವಾರ ಬೆಳಗ್ಗೆ ಅವರ ಆಪ್ತ ಸಹಾಯಕ ಹಲವು ಬಾರಿ ಕರೆ ಮಾಡಿದರೂ ಸ್ವೀಕರಿಸದ ಹಿನ್ನೆಲೆಯಲ್ಲಿ ಕ್ವಾಟ್ರಸ್‌ಗೆ ತೆರಳಿ ಪರಿಶೀಲಿಸಿದಾಗ ಘಟನೆ ಬೆಳಕಿಗೆ ಬಂದಿದೆ. ತಕ್ಷಣ ಪೊಲೀಸರಿಗೆ ಮಾಹಿತಿ ನೀಡಲಾಗಿದ್ದು, ಸ್ಥಳಕ್ಕೆ ತೆರಳಿದ ಪೊಲೀಸರು ಪರಿಶೀಲನೆ ನಡೆಸಿದ್ದಾರೆ.

ಗೋವಿಂದರಾಜ್ ಅವರ ಸಾವಿನ ಮಾಹಿತಿ ತಿಳಿದು ಸೇಲಂನಲ್ಲಿದ್ದ ಕುಟುಂಬಸ್ಥರು ಭದ್ರಾವತಿಗೆ ಆಗಮಿಸುತ್ತಿದ್ದಾರೆ. ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಈ ಕುರಿತು ಭದ್ರಾವತಿ ನ್ಯೂಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481

ವಿಕ್ರಮ ವಾಹಿನಿ

## ಸವಿ ವಾಹಿನಿ

ಬದುಕು ಅನ್ನೋ ಹೊಲದಲ್ಲಿ ಸಮಸ್ಯೆ ಅನ್ನೋ ಕಳೆ ಬೆಳೆಯುತ್ತಲೇ ಇರುತ್ತೆ. ಹಾಗಂತ ಹೊಲ ಬಿಟ್ಟು ಹೋಗೋಕಾಗುತ್ತಾ? ಕಳೆ ಕೀಳೊ ಕಲೆ ಕಲಿತು ಬಾಳಬೇಕು ಅಷ್ಟೇ ..!

## ದಿನ ಪಂಚಾಂಗ

ಅಕ್ಟೋಬರ್, 06–2026, ಮಂಗಳವಾರ ವರ್ಷ ಋತು,
ಭಾದ್ರಪದ ಮಾಸ, ಬಹುಳ ಪಕ್ಷ
ಏಕಾದಶಿ ತಿಥಿ ರಾ.12:51
ಆಶ್ಲೇಷ ನಕ್ಷತ್ರ ರಾ.11:38
ರಾಹುಕಾಲ ಮ 3:06–4:36
ಸರ್ವತ್ರ ಏಕಾದಶಿ, ಇಂದಿರಾ ಏಕಾದಶಿ, ಲೋಕಾಪುರ ಬಾಲಭುಜಂಗ ಆರಾಧನೆ

## ಆಧ್ಯಾತ್ಮ

### 'ಉಸಿರಿನ ಗತಿಯಲ್ಲಿದೆ ಜಗತ್ತಿನ ಸಕಲ ಆಗುಹೋಗುಗಳ ರಹಸ್ಯ'




● ವಿಕ್ರಮ ವಾಹಿನಿ । ಗೋಕರ್ಣ

ಶ್ವಾಸದ ಮೂಲಕ ನಮ್ಮ ಜೀವನವನ್ನು ಮಾತ್ರವಲ್ಲ, ಜಗತ್ತಿನ ಎಲ್ಲಾ ಆಗುಹೋಗುಗಳನ್ನು ತಿಳಿದುಹೋಗಬಹುದು. ದೇಹದಲ್ಲಿ ಏನಿದೆಯೋ ಅದೇ ಬ್ರಹ್ಮಾಂಡದಲ್ಲಿ ಇರುವುದಾದ್ದರಿಂದ, ಪ್ರಪಂಚದ ಎಲ್ಲಾ ಆಗುಹೋಗುಗಳನ್ನು ಉಸಿರಿನ ಮೂಲಕ ತಿಳಿಯಬಹುದು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ವಿಷ್ಣುಗುಪ್ತ ವಿಶ್ವವಿದ್ಯಾಪೀಠದಿಂದ ಗೋಕರ್ಣದ ಅಶೋಕೆಯಲ್ಲಿ ಆಯೋಜಿತವಾದ ಎರಡು ದಿನಗಳ 'ಸ್ವರೋದಯ' ರಾಷ್ಟ್ರಿಯ ಜ್ಯೌತಿಷ ವಿಚಾರಮಂಥನದಲ್ಲಿ ಸಾನ್ನಿಧ್ಯವಹಿಸಿ ಮಾತನಾಡಿದ ಶ್ರೀಗಳು, ನಮ್ಮ ಶರೀರ ಮತ್ತು ಪ್ರಕೃತಿಯು ಮುಂದೆ ಆಗಬಹುದಾದ ಸನ್ನಿವೇಶಗಳ ಸೂಚನೆಯನ್ನು ನಮಗೆ ನೀಡುತ್ತದೆ. ಇದನ್ನು ಶಕುನ ಎಂಬುದಾಗಿ ಕರೆಯಲಾಗಿದ್ದು, ಇದು ಜ್ಯೌತಿಷ ಭಾಗವಾಗಿದೆ. ಹಾಗೆಯೇ ಶ್ವಾಸದ ಕುರಿತಾದ ಸ್ವರಶಾಸ್ತ್ರವೂ ಜ್ಯೌತಿಷದ ಅಂಗವೇ ಆಗಿದ್ದು, ಶ್ವಾಸದ ಗತಿಯನ್ನು ಅರ್ಥಮಾಡಿಕೊಂಡರೆ ಬದುಕನ್ನೇ ಅರ್ಥಮಾಡಿಕೊಂಡಂತೆ. ಎಲ್ಲರೂ ಮೂಗಿನಲ್ಲೇ ಉಸಿರಾಡುತ್ತಾರೆ ಹಾಗೂ ಉಸಿರನ್ನು ತೆಗೆದುಕೊಂಡು ಮತ್ತು ಹೊರಗೆ ಬಿಡುತ್ತಾರೆ. ಅದರಲ್ಲಿ ವಿಶೇಷವೇನಿಲ್ಲ ಎನಿಸಬಹುದು. ಆದರೆ ಶ್ವಾಸವೇ ಜೀವನವಾಗಿದ್ದು, ಉಸಿರಾಟದ ಮೂಲಕ ಜಗತ್ತನ್ನು ತಿಳಿಯಲು ಸಾಧ್ಯವಿದೆ. ನಮ್ಮ ಜೀವನದ ಹಾಗೂ ಜಗತ್ತಿನ ಶುಭಾಶುಭಗಳನ್ನು ಕೇವಲ ಉಸಿರಿನ ಅವಲೋಕನದ ಮೂಲಕ ತಿಳಿದುಕೊಳ್ಳಬಹುದು ಮಾತ್ರವಲ್ಲ, ನಮ್ಮ ಮುಂದಿನ ಹೆಜ್ಜೆಗಳನ್ನು ಸರಿಪಡಿಸಿಕೊಳ್ಳಬಹುದು ಎಂದು ಅಭಿಪ್ರಾಯಪಟ್ಟರು.

ಶರೀರಕ್ಕೂ ತಲೆಗೂ ಇರುವ ಸಂಬಂಧ ಜ್ಯೌತಿಷಕ್ಕೂ ಸ್ವರಶಾಸ್ತ್ರಕ್ಕೂ ಇದೆ. ಉಸಿರಾಟದ ಸೂಕ್ಷ್ಮ ಜ್ಞಾನ ತಿಳಿದಿಲ್ಲದಿದ್ದರೆ ದೈವಜ್ಞನು ಪರಿಪೂರ್ಣ ಎನಿಸಿಕೊಳ್ಳುವುದಿಲ್ಲ. ದೈವಜ್ಞರಿಗೆ ಮಾತ್ರವಲ್ಲ, ಜನಸಾಮಾನ್ಯನೂ ಕೂಡ ಈ ಶಾಸ್ತ್ರವನ್ನು ತಿಳಿದುಕೊಂಡು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬಹುದು ಎಂದು ಉಸಿರಾಟದ ಹಿನ್ನೆಲೆಯ ಸೂಕ್ಷ್ಮಗಳ ಮಾಹಿತಿಯನ್ನು ನೀಡಿದರು.

ಇಂದು ಶ್ವಾಸವಿದ್ಯೆ ಅಳಿವಿನ ಅಂಚಿನಲ್ಲಿದ್ದು, ಅದನ್ನು ಬಳಸುವ ಮೂಲಕ ನಾವು ಉಳಿಸಿಕೊಳ್ಳಬೇಕು. ನಮ್ಮ ಬದುಕನ್ನು ಪ್ರಯೋಗಾತ್ಮಕವಾಗಿ ಶ್ವಾಸಾವಲೋಕನ ಮಾಡಿಕೊಂಡರೆ ಈ ವಿದ್ಯೆಯ ಸಂರಕ್ಷಣೆಯಾಗುತ್ತದೆ. ಭಾರತೀಯ ಪರಂಪರೆ ಇಂತಹಾ ಅನೇಕ ಅಮೂಲ್ಯ ವಿಚಾರಗಳನ್ನು ಒಳಗೊಂಡಿದ್ದು, ಇಂದು ನಾವು ಅವುಗಳ ಕುರಿತಾಗಿ ಅಸಡ್ಡೆಯನ್ನು ಬೆಳೆಸಿಕೊಂಡಿದ್ದೇವೆ. ವಿದೇಶದವರು ನಮ್ಮ ಜ್ಞಾನ ಭಂಡಾರವನ್ನು ಕದ್ದುಕೊಂಡು ಹೋದಮೇಲೆ ಅವರಿಂದ ನಾವು ಮತ್ತೆ ಕಲಿಯುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ದೇಶದ ಶ್ರೇಷ್ಠ ದೈವಜ್ಞರಲ್ಲೊಬ್ಬರಾದ ಕೇರಳದ ವಿದ್ವಾನ್ ಕೈಮುಕ್ಕು ನಾರಾಯಣ ನಂಬೂದರಿ ಅವರನ್ನು ಶ್ರೀಗಳು ಆಶೀರ್ವದಿಸಿದರು. ಎರಡು ದಿನಗಳ ಕಾಲ ನಡೆದ ರಾಷ್ಟ್ರೀಯ ವಿಚಾರ ಗೋಷ್ಠಿಯಲ್ಲಿ ವಿದ್ವಾನ್ ಗೋಪಾಲಕೃಷ್ಣಶರ್ಮಾ 'ದೈವಜ್ಞನ ಲಕ್ಷಣ', ವಿದ್ವಾನ್ ರಾ. ಗಣಪತಿ ಭಟ್ಟರು 'ಸಮಾಹಿತಮನಾಃ', ವಿದ್ವಾನ್ ಶಿವಪ್ರಸಾದ್ ತಂತ್ರಿಗಳು 'ದೈವಜ್ಞನ ದಿನಚರಿ' ವಿಚಾರದ ಕುರಿತಾಗಿ ವಿಷಯ ಮಂಡಿಸಿದರು. ವಿದ್ವಾನ್ ಹಂದ್ರಮನೆ ಗೋಪಾಲಕೃಷ್ಣ ಭಟ್ ಗೋಷ್ಠಿಯ ಅಧ್ಯಕ್ಷತೆಯನ್ನುವಹಿಸಿದ್ದರು. ವಿಷ್ಣುಗುಪ್ತ ವಿಶ್ವವಿದ್ಯಾಪೀಠದ ವಿದ್ವಾನ್ ನರಸಿಂಹ ಭಟ್ಟ ಬಡಗು, ದೈವಜ್ಞ ಮಿತ್ತೂರು ಕೇಶವ ಭಟ್ಟ, ದೈವಜ್ಞ ಮಧುಸೂಧನ ಶರ್ಮಾ, ಡಾ. ಕೆ.ಸಿ. ನಾಗೇಶ್ ಭಟ್ ಸೇರಿದಂತೆ ನಾಡಿನ ವಿವಿಧ ಭಾಗಗಳ ದೈವಜ್ಞರು ವಿಚಾರಮಂಥನದಲ್ಲಿ ಭಾಗವಹಿಸಿದ್ದರು.

# ತೆಲುಗು ದೇಶಂ ಪಕ್ಷ ಹುಟ್ಟಿದ್ದು ಹೇಗೆ..?

**1982ರ ಬೇಗಂಪೇಟೆ ವಿಮಾನ ನಿಲ್ದಾಣದ ಘಟನೆ ಆಂಧ್ರಪ್ರದೇಶದ ರಾಜಕೀಯ ಇತಿಹಾಸದಲ್ಲಿ ಮಹತ್ವದ ತಿರುವು ತಂದಿತು. ಮುಖ್ಯಮಂತ್ರಿ ಟಿ. ಅಂಜಯ್ಯ ಅವರ ಸಾರ್ವಜನಿಕ ಅವಮಾನವೆಂಬ ಘಟನೆ 'ತೆಲುಗು ಸ್ವಾಭಿಮಾನ'ದ ರಾಜಕೀಯಕ್ಕೆ ಬಲ ನೀಡಿ, ಕೆಲವೇ ವಾರಗಳಲ್ಲಿ ಎನ್.ಟಿ. ರಾಮರಾವ್ ಅವರು ತೆಲುಗುದೇಶಂ ಪಕ್ಷ ಸ್ಥಾಪಿಸಲು ಕಾರಣವಾಯಿತು.**




ರಾಜೀವ್ ಗಾಂಧಿ ಅವರನ್ನು ಆಂಧ್ರದ ಅಂದಿನ ಮುಖ್ಯಮಂತ್ರಿ ಟಿ. ಅಂಜಯ್ಯ ಅವರು ಸ್ವಾಗತಿಸಲು ವಿಮಾನ ನಿಲ್ದಾಣದಲ್ಲಿ ಬೃಹತ್ತಾದ ಸ್ವಾಗತ ಕಾರ್ಯಕ್ರಮವನ್ನು ಆಯೋಜಿಸಿದ್ದರು. ಅದಕ್ಕಾಗಿ ಅವರಿಗೆ ಧನ್ಯವಾದ ಹೇಳುವ ಬದಲು ರಾಜೀವ್ ಗಾಂಧಿಯವರು ಸಾರ್ವಜನಿಕವಾಗಿ ಹಿರಿಯರಾದ ಟಿ.ಅಂಜನಯ್ಯ ಅವರನ್ನು ಬೈದರು. ಅವರ ಕಣ್ಣಲ್ಲಿ ಅಕ್ಷರಶಃ ನೀರು ಹಾಕಿಸಿದರು.

ಈ ಘಟನೆ ನಡೆದದ್ದು ಫೆಬ್ರವರಿ 1982ರಲ್ಲಿ ಹೈದರಾಬಾದ್‌ನ ಬೇಗಂಪೇಟೆ ವಿಮಾನ ನಿಲ್ದಾಣದಲ್ಲಿ. ಆಗ ಸಂಸತ್ ಸದಸ್ಯರಾಗಿದ್ದ ಮತ್ತು ಆಡಳಿತ ಕಾಂಗ್ರೆಸ್ ಪಕ್ಷದ ಪ್ರಧಾನ ಕಾರ್ಯದರ್ಶಿಯಾಗಿದ್ದ ರಾಜೀವ್ ಗಾಂಧಿ ಭೇಟಿಗಾಗಿ ಮುಖ್ಯಮಂತ್ರಿ ಟಿ. ಅಂಜಯ್ಯ ಆಗಮಿಸುತ್ತಿದ್ದರು.

ಪಕ್ಷದ ಕಾರ್ಯಕರ್ತರು, ಸಾಂಪ್ರದಾಯಿಕ ಸಂಗೀತ ಬ್ಯಾಂಡ್‌ಗಳು ಮತ್ತು ಬಹುತೇಕ ಇಡೀ ರಾಜ್ಯ ಸಚಿವ ಸಂಪುಟವನ್ನು ಒಳಗೊಂಡ ಜನಸಮೂಹವನ್ನು ಕರೆತಂದಿದ್ದ ಅಂಜಯ್ಯ, ಪಕ್ಷದ ನಾಯಕತ್ವವನ್ನು ಮೆಚ್ಚಿಸಲು ಟಾರ್ಮ್ಯಾಕ್ ಸಭೆಯನ್ನು ಏರ್ಪಡಿಸಿದ್ದರು.

ಸಭೆಯು ಪ್ರಮಾಣಿತ ಭದ್ರತಾ ಶಿಷ್ಟಾಚಾರಗಳನ್ನು ಮೀರಿ, ರಾಜೀವ್ ಗಾಂಧಿಯವರು ಇಳಿಯುತ್ತಿದ್ದಂತೆ ಅಸ್ತವ್ಯಸ್ತವಾದ ದೃಶ್ಯವನ್ನು ಸೃಷ್ಟಿಸಿತು. ಕ್ರಮಬದ್ಧತೆಯ ಕೊರತೆಯಿಂದ ಸಿಟ್ಟಿಗೆದ್ದ ರಾಜೀವ್ ಗಾಂಧಿ ಕೋಪಗೊಂಡರು. ಪತ್ರಿಕೆಯವರು, ಹಿರಿಯ ಸಚಿವರು ಮತ್ತು ನೆರೆದಿದ್ದ ಜನಸಮೂಹದ ಮುಂದೆ, ರಾಜೀವ್ ಗಾಂಧಿಯವರು ಮುಖ್ಯಮಂತ್ರಿ ಅಂಜಯ್ಯ ಅವರನ್ನು "ಬಫೂನ್" ಎಂದು ಕರೆದರು. ಅವರ ಸ್ವಾಗತವನ್ನು "ಸರ್ಕಸ್" ಎಂದು ಬಣ್ಣಿಸಿದರು ಎಂದು ವರದಿಯಾಗಿತ್ತು. ಈ ಅವಮಾನಕ್ಕೆ ಮತ್ತಷ್ಟು ಕಾರಣವಾಗಿ, ರಾಷ್ಟ್ರೀಯ ಪಕ್ಷದ ನಾಯಕತ್ವವು ಅದೇ ತಿಂಗಳ ಕೊನೆಯಲ್ಲಿ ಅಂಜಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ವಜಾಗೊಳಿಸಿತು.

ಸ್ಥಳೀಯ ಜನರು ಈ ಘಟನೆಯನ್ನು ತಮ್ಮ ಚುನಾಯಿತ ರಾಜ್ಯ ನಾಯಕನನ್ನು ಸಾರ್ವಜನಿಕವಾಗಿ ಅವಮಾನಿಸುವ ನವದೆಹಲಿಯ ರಾಜಕಾರಣಿಗಳು ಪ್ರಾದೇಶಿಕ ನಾಯಕರನ್ನು ಸಮಾನ ಪಾಲುದಾರ ಎಂದು ತಿಳಿಯುವ ಬದಲು ಬಿಸಾಡಬಹುದಾದ ಅಧೀನ ಅಧಿಕಾರಿಗಳಾಗಿ ಪರಿಗಣಿಸುತ್ತಾರೆ ಎಂಬ ಭಾವನೆಯನ್ನು ಈ ಘಟನೆ ಬಲಪಡಿಸಿತು.

ಜನಪ್ರಿಯ ಮತ್ತು ಜನಪ್ರಸಿದ್ಧ ತೆಲುಗು ಚಲನಚಿತ್ರ ನಟ ಎನ್.ಟಿ. ರಾಮರಾವ್ ಅವರು ಈ ವ್ಯಾಪಕ ಆಕ್ರೋಶವನ್ನು ಬಂಡವಾಳ ಮಾಡಿಕೊಂಡರು. ವಿಮಾನ ನಿಲ್ದಾಣದ ಘರ್ಷಣೆಯನ್ನು ತೆಲುಗು ಸ್ವಾಭಿಮಾನಕ್ಕೆ ನೇರ ಅವಮಾನ ಎಂದು ನಿರೂಪಿಸಿದರು.

ಅದಾಗಿ ಕೆಲವೇ ವಾರಗಳ ಅನಂತರ ಮಾರ್ಚ್ 1982ರಲ್ಲಿ ತೆಲುಗು ದೇಶಂ ಪಕ್ಷ (ಟಿಡಿಪಿ) ಸ್ಥಾಪಿಸಿಯೇ ಬಿಟ್ಟರು. ಬೇಗಂಪೇಟೆ ವಿಮಾನ ನಿಲ್ದಾಣದ ಘಟನೆಯು ಪ್ರಚಾರದ ಕೇಂದ್ರ ವಿಷಯವಾಯಿತು, ಇದು ಕೇಂದ್ರ ಅಧಿಕಾರಿಗಳಿಂದ ರಾಜ್ಯದ ಘನತೆಯನ್ನು ರಕ್ಷಿಸುವ ಅಗತ್ಯವನ್ನು ಸಂಕೇತಿಸುತ್ತದೆ.

ಪ್ರಾದೇಶಿಕ ಹೆಮ್ಮೆಯ ಈ ವೇದಿಕೆಯ ಮೇಲೆ ಸ್ಪರ್ಧಿಸುತ್ತ ಹೊಸದಾಗಿ ರೂಪುಗೊಂಡ ಟಿಡಿಪಿ ಜನವರಿ 1983ರ ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಜಯ ಸಾಧಿಸಿತು. ಆಂಧ್ರಪ್ರದೇಶದಲ್ಲಿ ದಶಕಗಳ ನಿರಂತರ ಕಾಂಗ್ರೆಸ್ ಆಡಳಿತವನ್ನು ಕೊನೆಗೊಳಿಸಿತು.



**ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಪಶ್ಚಿಮ ನೌಕಾಪಡೆ ಕಮಾಂಡಿನ ಕಮಾಂಡಿಂಗ್ ಇನ್ ಚೀಫ್, ವೈಸ್ ಅಡ್ಮಿರಲ್ ಸಂಜಯ್ ವಾತ್ಸಾಯನ್ ಅವರು ವಿಧಾನಸೌಧದಲ್ಲಿ ಸೋಮವಾರ ಭೇಟಿ ಮಾಡಿದರು. ರಿಯರ್ ಅಡ್ಮಿರಲ್ ವಿಕ್ರಂ ಮೆನನ್, ನೌಕಾ ಪಡೆ ಹಿರಿಯ ಅಧಿಕಾರಿ (Cmde) ಅಮಿತವ್ ಮುಖರ್ಜಿ, ಕ್ಯಾಪ್ಟನ್ ಜಿ ರಾಜ, ಎಲ್ ಎಂ ಪಿ ಸಾಹಿಲ್ ಕುಮಾರ್, ಎಲ್ ಎಸ್ ವಿವೇಕ್ ಧಕಡ್, ಎಲ್‌ಎಸ್ ಕೆ ರವಿ ಕೃಷ್ಣನ್, ಎಲ್‌ಎಸ್ ಎಂ ವಿ ಸೂರಿ, ಸಂಸದ ಹಾಗೂ ಸಿಎಂ ಸಲಹೆಗಾರ ಜಿ ಸಿ ಚಂದ್ರಶೇಖರ್, ಅಪರ ಮುಖ್ಯಕಾರ್ಯದರ್ಶಿ ರಾಜೇಂದರ್ ಕುಮಾರ್ ಕಟಾರಿಯ, ಬಿಡಿಎ ಮುಖ್ಯ ಆಯುಕ್ತ ಮಣಿವಣ್ಣನ್ ಮತ್ತಿತರರು ಉಪಸ್ಥಿತರಿದ್ದರು.**

# ಬೆಂಗಳೂರು ಅಭಿವೃದ್ಧಿಗೆ 15 ವರ್ಷಗಳ ಸಮಗ್ರ ಯೋಜನೆ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ನಗರದ ಸಮಗ್ರ ಅಭಿವೃದ್ಧಿಗೆ ಮುಂದಿನ 10ರಿಂದ 15 ವರ್ಷಗಳ ದೂರದೃಷ್ಟಿಯ ಯೋಜನೆ ರೂಪಿಸಲಾಗುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಗೃಹ ಕಚೇರಿ ಕೃಷ್ಣಾದಲ್ಲಿ ಸೋಮವಾರ ನಡೆದ ಬೆಂಗಳೂರು ಮಹಾನಗರ ಪ್ರದೇಶದ ಆರ್ಥಿಕ ಅಭಿವೃದ್ಧಿ ಕುರಿತ ಸಲಹಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, 2037ರ ವೇಳೆಗೆ ರಾಜ್ಯದ ಆರ್ಥಿಕತೆಯನ್ನು 400–420 ಶತಕೋಟಿ ಡಾಲರ್‌ಗೆ ಹಾಗೂ 2047ರ ವೇಳೆಗೆ ಒಂದು ಟ್ರಿಲಿಯನ್ ಡಾಲರ್‌ಗೆ ತಲುಪಿಸುವ ಗುರಿ ಹೊಂದಲಾಗಿದೆ.

ಇದಕ್ಕೆ ಪೂರಕವಾಗಿ ಬೆಂಗಳೂರು ಮಹಾನಗರ ಪ್ರದೇಶದಲ್ಲಿ ಸುಗಮ ಸಂಚಾರ, ವಸತಿ, ನೀರು ಮತ್ತು ಕೈಗಾರಿಕಾ ಅಭಿವೃದ್ಧಿಗೆ ಅಗತ್ಯ ರೂಪುರೇಷೆ ಸಿದ್ಧಪಡಿಸಲಾಗುತ್ತಿದೆ ಎಂದರು.

ಬಿಎಂಆರ್ ವ್ಯಾಪ್ತಿಯಲ್ಲಿ 9 ಸಮಗ್ರ ಕೈಗಾರಿಕಾ ಟೌನ್‌ಶಿಪ್‌ಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಈಗಾಗಲೇ 7,900 ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದ್ದು, 5,600 ಎಕರೆ ಭೂಸ್ವಾಧೀನ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಸಿಂಗಾಪುರದ ಪುಂಗಾಲ್ ಮಾದರಿಯಲ್ಲಿ ಎಐ ಸಿಟಿ ಹಾಗೂ ಎಐ ವಿಶ್ವವಿದ್ಯಾಲಯ ಸ್ಥಾಪನೆಗೂ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

**312 ಕಿ.ಮೀ. ಮೆಟ್ರೋ:** 2037ರ ವೇಳೆಗೆ ಹೆಚ್ಚುವರಿಯಾಗಿ 312 ಕಿ.ಮೀ. ಮೆಟ್ರೋ, 72 ಕಿ.ಮೀ. ಸಬ್‌ಅರ್ಬನ್ ರೈಲು ಹಾಗೂ 210 ಕಿ.ಮೀ. ವರ್ತುಲ ರಸ್ತೆ ನಿರ್ಮಿಸುವ ಯೋಜನೆ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಪಿಆರ್‌ಆರ್–2 ಅನ್ನು ನೈಸ್ ರಸ್ತೆಗೆ ಸಂಪರ್ಕಿಸುವುದು ಹಾಗೂ ಬೆಂಗಳೂರು–ತುಮಕೂರು, ಬೆಂಗಳೂರು–ಮೈಸೂರು ಮತ್ತು ಬೆಂಗಳೂರು–ಕೆಜಿಎಫ್ ಕಾರಿಡಾರ್‌ಗಳನ್ನು ಸಂಪರ್ಕಿಸುವ 270 ಕಿ.ಮೀ. ಆರ್‌ಆರ್‌ಟಿಎಸ್ ರಸ್ತೆಯ ಪ್ರಸ್ತಾವನೆಯೂ ಚರ್ಚೆಗೆ ಬಂತು.

**ನೀರು, ವಸತಿಗೆ ಒತ್ತು:** 2037ರ ವೇಳೆಗೆ ಬಿಎಂಆರ್ ವ್ಯಾಪ್ತಿಗೆ 3,600 ಎಂಎಲ್‌ಡಿ ನೀರಿನ ಅಗತ್ಯವಿದ್ದು, ಕುಡಿಯುವ ಹಾಗೂ ಕೈಗಾರಿಕಾ ಬಳಕೆಗೆ ನೀರು ಒದಗಿಸಲು ಸಮಗ್ರ ಯೋಜನೆ ರೂಪಿಸಲಾಗುವುದು. ಸಂಸ್ಕರಿಸಿದ ನೀರಿನ ಮರುಬಳಕೆ ಹಾಗೂ ಕೆರೆಗಳ ಪುನರ್ಭರ್ತಿಗೆ ಆದ್ಯತೆ ನೀಡುವಂತೆ ಸಿಎಂ ಸೂಚಿಸಿದರು.

ಬೆಂಗಳೂರು ನಗರ ಜಿಲ್ಲೆಯ ಸಂಪೂರ್ಣ ಪ್ರದೇಶವನ್ನು BWSSB ವ್ಯಾಪ್ತಿಗೆ ಹಂತ ಹಂತವಾಗಿ ತಂದು ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆ ಅಭಿವೃದ್ಧಿಪಡಿಸುವ ಉದ್ದೇಶವಿದೆ. ಜಿಲ್ಲೆಯ ಎಲ್ಲ ಪ್ರದೇಶಗಳನ್ನು ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ತರುವ ಬಗ್ಗೆಯೂ ಕ್ರಮ ಕೈಗೊಳ್ಳಲಾಗುವುದು.

ಇದೇ ವೇಳೆ 6ರಿಂದ 6.5 ಲಕ್ಷ ಕೈಗೆಟಕುವ ದರದ ಮನೆಗಳನ್ನು ನಿರ್ಮಿಸುವ ಯೋಜನೆ ರೂಪಿಸಲಾಗಿದ್ದು, ಕೈಗಾರಿಕಾ ವಲಯದ 40–50 ಸಾವಿರ ಕಾರ್ಮಿಕರಿಗೆ ವಸತಿ ಕಲ್ಪಿಸಲು ಉದ್ದೇಶಿಸಲಾಗಿದೆ.



**ಸಿಎಂ ಡಿ ಕೆ ಶಿವಕುಮಾರ್ ಅವರು ಗೃಹ ಕಚೇರಿ ಕೃಷ್ಣಾದಲ್ಲಿ ಸೋಮವಾರ ಬೆಂಗಳೂರು ಮಹಾನಗರ ಪ್ರದೇಶದ ಆರ್ಥಿಕ ಅಭಿವೃದ್ಧಿ ಯೋಜನೆ ಕುರಿತ ಸಲಹಾ ಸಮಿತಿಯ ಸಭೆ ನಡೆಸಿದರು. ಸಚಿವರಾದ ಎಂ.ಬಿ. ಪಾಟೀಲ್, ಕೃಷ್ಣ ಬೈರೇಗೌಡ ಪ್ರಿಯಾಂಕ್ ಖರ್ಗೆ, ಬೈರತಿ ಸುರೇಶ್, ಸಂಸದ ಹಾಗೂ ಸಿಎಂ ಪ್ರಧಾನ ಸಲಹೆಗಾರ ಡಾ. ಜಿ.ಸಿ. ಚಂದ್ರಶೇಖರ್, ಸಿಎಂ ಆರ್ಥಿಕ ಸಲಹೆಗಾರ ಎಲ್ ಕೆ ಅತೀಕ್, ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಜಿಬಿಎ ಮುಖ್ಯ ಆಯುಕ್ತ ಡಾ. ಎಂ. ಮಹೇಶ್ವರರಾವ್, ಸುಸ್ಥಿರತೆ, ಉದ್ಯೋಗ ಮತ್ತು ಬೆಳವಣಿಗೆ ಸಂಸ್ಥೆ (ISEG) ನಿರ್ದೇಶಕ ಡಾ. ಸಿರೀಶ್ ಸಂಖೆ, ಖ್ಯಾತ ಉದ್ಯಮಿಗಳಾದ ಟಿ.ಎ. ಮೋಹನದಾಸ್ ಪೈ, ಕ್ರಿಸ್ ಗೋಪಾಲಕೃಷ್ಣನ್ ಮತ್ತಿತರರು ಭಾಗವಹಿಸಿದ್ದರು.**

## ಶಿವಲಿಂಗದ ಸುತ್ತ ಹೆಡೆಯೆತ್ತಿ ನಿಂತ ಮೂರು ನಾಗರಹಾವುಗಳು!



● ವಿಕ್ರಮ ವಾಹಿನಿ । ನೆಲ್ಲೂರು

ಆಂಧ್ರಪ್ರದೇಶದ ನೆಲ್ಲೂರು ಜಿಲ್ಲೆಯ ಮನುಬೋಲು ಚೆರ್ಲೋಪಲ್ಲಿ ಗೇಟ್ ಸಮೀಪದ ಶ್ರೀ ವಿಶ್ವನಾಥ ಸ್ವಾಮಿ ದೇವಾಲಯದ ಗರ್ಭಗುಡಿಯಲ್ಲಿ ಮೂರು ನಾಗರಹಾವುಗಳು ಶಿವಲಿಂಗದ ಸುತ್ತ ಹೆಡೆಯೆತ್ತಿ ನಿಂತ ಅಪರೂಪದ ಘಟನೆ ನಡೆದಿದೆ.

ಸೋಮವಾರ ಮುಂಜಾನೆ ಪೂಜೆಗೆಂದು ದೇವಾಲಯಕ್ಕೆ ಆಗಮಿಸಿದ ಅರ್ಚಕರು ಶಿವಲಿಂಗದ ಸುತ್ತ ಹಾವುಗಳು ಇರುವುದನ್ನು ಗಮನಿಸಿ ಆಶ್ಚರ್ಯಚಕಿತರಾದರು.

ಮೂರು ನಾಗರಹಾವುಗಳು ಶಿವಲಿಂಗದ ಸುತ್ತ ಸಂಚರಿಸಿ ಬಳಿಕ ಗರ್ಭಗುಡಿಯ ಮುಂಭಾಗದಲ್ಲಿ ಕೆಲಕಾಲ ಹೆಡೆಯೆತ್ತಿ ನಿಂತಿದ್ದವು.

ಇತ್ತೀಚೆಗೆ ದೇವಾಲಯದ ಆವರಣದಲ್ಲಿ ಹಾವುಗಳು ಕಾಣಿಸಿಕೊಳ್ಳುತ್ತಿದ್ದ ಹಿನ್ನೆಲೆಯಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿ ಕ್ಯಾಮೆರಾದಲ್ಲಿ ಈ ದೃಶ್ಯಗಳು ಸೆರೆಯಾಗಿವೆ.

# ಮುಂಬೈ ಬಸ್ ಡಿಪೋದಲ್ಲಿ ಭಾರೀ ಬೆಂಕಿ

● ವಿಕ್ರಮ ವಾಹಿನಿ । ಮುಂಬೈ

ಮಹಾರಾಷ್ಟ್ರದ ರಾಜಧಾನಿ ಮುಂಬೈನ ಪ್ರಮುಖ ಬಸ್ ಡಿಪೋವೊಂದರಲ್ಲಿ ಸೋಮವಾರ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, ನಿಲುಗಡೆ ಮಾಡಲಾಗಿದ್ದ ಹಲವು ಸಿಎನ್‌ಜಿ ಬಸ್‌ಗಳು ಧಗಧಗನೆ ಹೊತ್ತಿ ಉರಿದಿವೆ. ಡಿಪೋದಲ್ಲಿದ್ದ ಬಸ್‌ವೊಂದರಲ್ಲಿ ದಿಢೀರ್ ಬೆಂಕಿ ಕಾಣಿಸಿಕೊಂಡಿದ್ದು, ಕ್ಷಣಾರ್ಧದಲ್ಲಿ ಪಕ್ಕದಲ್ಲಿದ್ದ ಇತರ ಬಸ್‌ಗಳಿಗೂ ವ್ಯಾಪಿಸಿದೆ. ಘಟನೆಯಿಂದ ಭಾರಿ ಪ್ರಮಾಣದ ಹೊಗೆ ಆವರಿಸಿದ್ದು, ಬೆಂಕಿಯ ಜ್ವಾಲೆಗಳು ಆಕಾಶದೆತ್ತರಕ್ಕೆ ಚಿಮ್ಮಿದ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿವೆ.

ಮಾಹಿತಿ ತಿಳಿಯುತ್ತಿದ್ದಂತೆ ಹಲವು ಅಗ್ನಿಶಾಮಕ ವಾಹನಗಳು ಹಾಗೂ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದರು. ಘಟನಾ ಸ್ಥಳದಲ್ಲಿದ್ದ ಸಿಬ್ಬಂದಿ ಹಾಗೂ ಚಾಲಕರು ತಕ್ಷಣ ಹೊರಬಂದಿದ್ದರಿಂದ ಭಾರಿ ಜೀವಹಾನಿ ತಪ್ಪಿದೆ ಎನ್ನಲಾಗಿದೆ.

ಬೆಂಕಿ ಅವಘಡಕ್ಕೆ ಶಾರ್ಟ್ ಸರ್ಕ್ಯೂಟ್ ಅಥವಾ ಸಿಎನ್‌ಜಿ ಸೋರಿಕೆ ಕಾರಣವೇ ಎಂಬ ಬಗ್ಗೆ ಪೊಲೀಸರು ಹಾಗೂ ಸಾರಿಗೆ ಇಲಾಖೆ ತನಿಖೆ ನಡೆಸುತ್ತಿದ್ದು, ಬಸ್‌ಗಳು ಹಾಗೂ ಇತರ ಆಸ್ತಿಪಾಸ್ತಿಗೆ ಉಂಟಾದ ಹಾನಿಯ ನಿಖರ ಪ್ರಮಾಣವನ್ನು ಅಧಿಕಾರಿಗಳು ಪರಿಶೀಲಿಸುತ್ತಿದ್ದಾರೆ.

# ಗ್ರಂಥಪಾಲಕರ ನೇಮಕಾತಿಗೆ ಆಗ್ರಹಿಸಿ ಬೃಹತ್ ಪ್ರತಿಭಟನೆ

**ಸುಮಾರು 18 ವರ್ಷಗಳಿಂದ ಗ್ರಂಥಪಾಲಕರ ನಿಯಮಿತ ನೇಮಕಾತಿ ನಡೆಯದಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ಗ್ರಂಥಾಲಯ ಸಂಘದ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಸರ್ಕಾರಿ ಸಂಸ್ಥೆಗಳಲ್ಲಿ ಖಾಲಿ ಹುದ್ದೆ ಭರ್ತಿ, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಸೂಕ್ತ ನೇಮಕಾತಿ ನೀತಿ ಹಾಗೂ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ಸೇವೆ ಸಕ್ರಮಗೊಳಿಸುವಂತೆ ಸಂಘ ಆಗ್ರಹಿಸಿದೆ.**

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯದ ಸರ್ಕಾರಿ ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಅರ್ಹ ಗ್ರಂಥಪಾಲಕರ ನೇಮಕಾತಿಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಗ್ರಂಥಾಲಯ ಸಂಘ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಇಂದು ಒಂದು ದಿನದ ಬೃಹತ್ ಪ್ರತಿಭಟನೆ ನಡೆಸಲಾಯಿತು.

ರಾಜ್ಯದ ಸರ್ಕಾರಿ ಸಂಸ್ಥೆಗಳಲ್ಲಿ ಬಹುಕಾಲದಿಂದ ಬಾಕಿ ಉಳಿದಿರುವ ಅರ್ಹ ಗ್ರಂಥಪಾಲಕರ ನೇಮಕಾತಿ ಪ್ರಕ್ರಿಯೆಯನ್ನು ತಕ್ಷಣ ಆರಂಭಿಸಬೇಕು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿಯೂ ವೃತ್ತಿಪರ ಗ್ರಂಥಪಾಲಕರ ನೇಮಕಾತಿಗೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಂಘ ಆಗ್ರಹಿಸಿದೆ. ಸುಮಾರು 18 ವರ್ಷಗಳಿಂದ ನಿಯಮಿತ ನೇಮಕಾತಿ ನಡೆಯದಿರುವ ಹಿನ್ನೆಲೆಯಲ್ಲಿ ಈ ಪ್ರತಿಭಟನೆ ಆಯೋಜಿಸಲಾಗಿತ್ತು.

ಕರ್ನಾಟಕ ಗ್ರಂಥಾಲಯ ಸಂಘದ ಅಧ್ಯಕ್ಷ ಡಾ. ಎಸ್.ಎಲ್. ಕಾಡದೇವರಮಠ ಅವರು ಮಾತನಾಡಿ, ಗ್ರಂಥಾಲಯಗಳು ಶಿಕ್ಷಣ ಸಂಸ್ಥೆಗಳ ಹೃದಯವಾಗಿದ್ದು, ಜ್ಞಾನ, ಕಲಿಕೆ, ಸಂಶೋಧನೆ ಹಾಗೂ ಶೈಕ್ಷಣಿಕ ಅಭಿವೃದ್ಧಿಯ ಪ್ರಮುಖ ಕೇಂದ್ರಗಳಾಗಿವೆ. ಅರ್ಹ ವೃತ್ತಿಪರ ಗ್ರಂಥಪಾಲಕರ ಕೊರತೆಯಿಂದ ಗ್ರಂಥಾಲಯ ಸೇವೆಗಳ ಪರಿಣಾಮಕಾರಿ ಬಳಕೆ ಮತ್ತು ಅಭಿವೃದ್ಧಿಗೆ ತೊಂದರೆಯಾಗುತ್ತಿದೆ ಎಂದರು.

ಸಂಘದ ಅಂದಾಜಿನ ಪ್ರಕಾರ ರಾಜ್ಯದಲ್ಲಿ ಪಿಯು ಕಾಲೇಜುಗಳು, ಪದವಿ ಕಾಲೇಜುಗಳು, ವಿಶ್ವವಿದ್ಯಾಲಯಗಳು ಹಾಗೂ ವೃತ್ತಿಪರ ಕಾಲೇಜುಗಳು ಸೇರಿದಂತೆ ಸುಮಾರು 10,000ರಿಂದ 12,000 ಗ್ರಂಥಾಲಯ ಹುದ್ದೆಗಳ ಅಗತ್ಯವಿದೆ. ಈ ಪೈಕಿ ಹಲವು ಹುದ್ದೆಗಳು ಹಲವು ವರ್ಷಗಳಿಂದ ಖಾಲಿ ಉಳಿದಿವೆ ಅಥವಾ ನಿಯಮಿತ ನೇಮಕಾತಿಯ ಮೂಲಕ ಭರ್ತಿಯಾಗಿಲ್ಲ ಎಂದು ಗ್ರಂಥಾಲಯ ಸಂಘ ಆಕ್ರೋಶ ವ್ಯಕ್ತಪಡಿಸಿದೆ.

ಖ್ಯಾತ ಜ್ಯೋತಿಷಿ ಆನಂದ ಗುರೂಜಿ, ಹಿರಿಯ ಚಲನಚಿತ್ರ ಕಲಾವಿದ ಮುಖ್ಯಮಂತ್ರಿ ಚಂದ್ರು ಹಾಗೂ ಶಿಕ್ಷಣ ತಜ್ಞ ಪ್ರೊ.ರಾಧಾಕೃಷ್ಣ ಸೇರಿದಂತೆ ಹಲವು ಗಣ್ಯರು ಪ್ರತಿಭಟನೆಯಲ್ಲಿ ಪಾಲ್ಗೊಂಡು, ಗ್ರಂಥಾಲಯ ಸಂಘದ ಹೋರಾಟಕ್ಕೆ ಬೆಂಬಲ ಸೂಚಿಸಿದರು.

ಖಾಸಗಿ ಕಾಲೇಜುಗಳು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ಅರ್ಹ ಗ್ರಂಥಾಲಯ ಶಿಕ್ಷಣ ಪಡೆದ ವೃತ್ತಿಪರರಿಗೆ ಸೀಮಿತ ಉದ್ಯೋಗಾವಕಾಶಗಳಿರುವ ಬಗ್ಗೆ ಸಂಘಟನೆ ಕಳವಳ ವ್ಯಕ್ತಪಡಿಸಿತು. ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಅರ್ಹ ಗ್ರಂಥಪಾಲಕರ ನೇಮಕಾತಿಗೆ ಸೂಕ್ತ ಮಾನದಂಡಗಳನ್ನು ಸರ್ಕಾರ ರೂಪಿಸಬೇಕು ಹಾಗೂ ಅಲ್ಲಿನ ಗ್ರಂಥಪಾಲಕರ ವೇತನ ಮತ್ತು ಸೇವಾ ಷರತ್ತುಗಳಲ್ಲಿ ಸಮಾನತೆ ತರಲು ಕ್ರಮ ಕೈಗೊಳ್ಳಬೇಕು ಎಂದು ಸಂಘ ಒತ್ತಾಯಿಸಿದೆ.

**ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ಸೇವೆ ಸಕ್ರಮಕ್ಕೆ ಆಗ್ರಹ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ಸೇವೆಯನ್ನು ಸಕ್ರಮಗೊಳಿಸಿ, ಅವರಿಗೆ ಸೂಕ್ತ ಸೇವಾ ಭದ್ರತೆ ಒದಗಿಸಬೇಕು ಎಂಬುದೂ ಗ್ರಂಥಾಲಯ ಸಂಘದ ಪ್ರಮುಖ ಬೇಡಿಕೆಯಾಗಿದೆ. ಗ್ರಾಮೀಣ ಪ್ರದೇಶಗಳಲ್ಲಿ ಗ್ರಂಥಾಲಯ ಹಾಗೂ ಓದುವ ಸೇವೆಗಳ ಅಭಿವೃದ್ಧಿಗೆ ಅವರು ನೀಡುತ್ತಿರುವ ಕೊಡುಗೆಯನ್ನು ಸರ್ಕಾರ ಗುರುತಿಸಬೇಕು ಎಂದು ಸಂಘ ಒತ್ತಾಯಿಸಿದೆ.

**ಎರಡು ಸಾವಿರಕ್ಕೂ ಹೆಚ್ಚು ವೃತ್ತಿಪರರು ಭಾಗಿ:** ನಗರದ ಸ್ವಾತಂತ್ರ್ಯ ಉದ್ಯಾನದಲ್ಲಿ ನಡೆದ ಪ್ರತಿಭಟನೆಯಲ್ಲಿ 2,000ಕ್ಕೂ ಹೆಚ್ಚು ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವೃತ್ತಿಪರರು, ಗ್ರಂಥಪಾಲಕರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.ಧಾರವಾಡ ಸೇರಿದಂತೆ ಉತ್ತರ ಕರ್ನಾಟಕದ ವಿವಿಧ ಜಿಲ್ಲೆಗಳ ವೃತ್ತಿಪರರು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗ್ರಂಥಾಲಯ ಚಳವಳಿಯ ಬೆಂಬಲಿಗರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡರು.

**ಶಿಕ್ಷಣ ಸಚಿವ ಮಧು ಬಂಗಾರಪ್ಪ ಭರವಸೆ:** ಶಿಕ್ಷಣ ಸಚಿವ ಮಧು ಬಂಗಾರಪ್ಪ ಸಂಘದ ಪ್ರತಿನಿಧಿಗಳನ್ನು ಒಂದು ವಾರದ ಒಳಗೆ ಚರ್ಚೆಗೆ ಆಹ್ವಾನಿಸಿ, ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಪ್ರಯತ್ನ ಮಾಡುವುದಾಗಿ ಆಶ್ವಾಸನೆ ನೀಡಿದರು.

ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಗ್ರಂಥಪಾಲಕರ ಹುದ್ದೆಗಳನ್ನು ಭರ್ತಿ ಮಾಡುವುದು, ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಸೂಕ್ತ ನೇಮಕಾತಿ ನೀತಿ ರೂಪಿಸುವುದು, ಗ್ರಾಮ ಪಂಚಾಯಿತಿ ಗ್ರಂಥಾಲಯ ಮೇಲ್ವಿಚಾರಕರ ಸೇವೆಯನ್ನು ಸಕ್ರಮಗೊಳಿಸುವುದು ಸೇರಿದಂತೆ ಒಟ್ಟು ಎಂಟು ಪ್ರಮುಖ ಬೇಡಿಕೆಗಳನ್ನು ಸಂಘ ಸರ್ಕಾರದ ಮುಂದಿಟ್ಟಿದೆ.

ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವೃತ್ತಿಗೆ ಸಂಬಂಧಿಸಿದ ಬಹುಕಾಲದ ಸಮಸ್ಯೆಗಳನ್ನು ಸರ್ಕಾರ ಸಹಾನುಭೂತಿಯಿಂದ ಪರಿಗಣಿಸಿ, ಸೂಕ್ತ ಹಾಗೂ ಕಾಲೋಚಿತ ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಗ್ರಂಥಾಲಯ ಸಂಘದ ಮುಖಂಡ ಪ್ರೊ. ಕುಣ್ಣೂರ ಇದೇ ವೇಳೆ ಸರ್ಕಾರವನ್ನು ಆಗ್ರಹಿಸಿದರು.



# ಮೇಲ್ಮನೆ 4 ಕ್ಷೇತ್ರಗಳಲ್ಲೂ ಎನ್‌ಡಿಎ ಗೆಲುವು: ವಿಜಯೇಂದ್ರ ವಿಶ್ವಾಸ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯದ ವಿಧಾನಪರಿಷತ್ತಿನ ನಾಲ್ಕೂ ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ಗೆಲ್ಲುವ ವಿಶ್ವಾಸವಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ.

ಆಗ್ನೇಯ ಪದವೀಧರರ ಕ್ಷೇತ್ರದ ಎನ್.ಡಿ.ಎ. ಅಭ್ಯರ್ಥಿ ಕೆ.ಎಂ. ಸುರೇಶ್, ಬೆಂಗಳೂರು ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ಎ.ಪಿ.ರಂಗನಾಥ್ ಅವರು ಇಂದು ಲಾಲ್ ಬಾಗ್ ಬಳಿಯಿಂದ ಪಾದಯಾತ್ರೆಯ ಮೂಲಕ ಶಾಂತಿನಗರದಲ್ಲಿರುವ ಪ್ರಾದೇಶಿಕ ಆಯುಕ್ತರ ಕಚೇರಿಗೆ ತೆರಳಿ ನಾಮಪತ್ರ ಸಲ್ಲಿಸಿದರು. ಇದೇವೇಳೆ ಮಾಧ್ಯಮಗಳ ಜೊತೆ ಮಾತನಾಡಿದ ವಿಜಯೇಂದ್ರ ಅವರು, ಎ.ಪಿ.ರಂಗನಾಥ್ ಮತ್ತು ಕೆ.ಎಂ. ಸುರೇಶ್



ಅವರು ನಾಮಪತ್ರ ಸಲ್ಲಿಸಿದ್ದಾರೆ. ವಾತಾವರಣ ತುಂಬಾ ಚೆನ್ನಾಗಿದೆ ಎಂದು ನುಡಿದರು.

ನಾವು ಮತ್ತು ಜೆಡಿಎಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಚುನಾವಣೆ ಗೆಲ್ಲಲೇಬೇಕೆಂಬ ಉತ್ಸಾಹದಿಂದ ಕೆಲಸ ಮಾಡುತ್ತಿದ್ದೇವೆ. ಮೇಲ್ಮನೆಯ ಪಾವಿತ್ರ್ಯತೆ ಕಾಪಾಡಬೇಕಾಗಿದೆ. ಇಂಥ ಉತ್ತಮ ವ್ಯಕ್ತಿಗಳು ಗೆದ್ದು ಬರಬೇಕಿದೆ ಎಂದು ತಿಳಿಸಿದರು. ಇವರೆಲ್ಲ ಗೆಲ್ಲಲೇಬೇಕೆಂಬ ಸಂಕಲ್ಪದೊಂದಿಗೆ ಕೆಲಸ ಮಾಡುತ್ತೇವೆ ಎಂದು ವಿವರಿಸಿದರು.

ನಮೋಶಿ ಮತ್ತು ಸಂಕನೂರು ಅವರೂ ನಾಳೆ ನಾಮಪತ್ರ ಸಲ್ಲಿಸುತ್ತಾರೆ. 4 ಕ್ಷೇತ್ರಗಳಲ್ಲೂ ನಮ್ಮ ಎನ್‌ಡಿಎ ಅಭ್ಯರ್ಥಿಗಳು ಗೆದ್ದೇಗೆಲ್ಲುತ್ತಾರೆ ಎಂಬ ಸಂಪೂರ್ಣ ವಿಶ್ವಾಸ ಇದೆ ಎಂದು ತಿಳಿಸಿದರು.

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ವಿಧಾನಸಭೆಯ ವಿಪಕ್ಷ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಪಕ್ಷದ ಮುಖಂಡರು ಉಪಸ್ಥಿತರಿದ್ದರು.

## ಚಾಮರಾಜಪೇಟೆಯಲ್ಲಿ ಇಂದು 'ನಶೆ ಮುಕ್ತ ಸಮಾಜ' ಜಾಗೃತಿ ಅಭಿಯಾನ

● ವಿಕ್ರಮ ವಾಹಿನಿ | ಬೆಂಗಳೂರು

ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರು, ವಿಶೇಷವಾಗಿ ಯುವಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ 'ನಶೆ ಮುಕ್ತ ಸಮಾಜ' ಜಾಗೃತಿ ಅಭಿಯಾನವನ್ನು ಅ.6ರಂದು ಸಂಜೆ 7 ಗಂಟೆಗೆ ಚಾಮರಾಜಪೇಟೆಯ ಜೆ.ಜೆ.ಆರ್. ನಗರದ ಸಂಗಮ್ ಸರ್ಕಲ್‌ನಲ್ಲಿ ಆಯೋಜಿಸಲಾಗಿದೆ.

ವಸತಿ ಸಚಿವ ಹಾಗೂ ಚಾಮರಾಜಪೇಟೆ ಶಾಸಕ ಬಿ.ಝಡ್. ಜಮೀರ್ ಅಹ್ಮದ್ ಖಾನ್ ಅವರ ಮಾರ್ಗದರ್ಶನದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಕರ್ನಾಟಕ ಹ್ಯೂಮ್ಯಾನಿಟಿ ವೆಲ್ಫೇರ್ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಬಿ.ಕೆ. ಅಲ್ತಾಫ್ ಖಾನ್ ಉಪಸ್ಥಿತರಿರುವರು.

ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ವೈದ್ಯಕೀಯ ಕ್ಷೇತ್ರದ ಗಣ್ಯರು ಭಾಗವಹಿಸಲಿದ್ದಾರೆ. ಮಾದಕ ವಸ್ತುಗಳ ಸೇವನೆ, ಮಾರಾಟ ಮತ್ತು ಅಕ್ರಮ ವಿತರಣೆಯ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಿ, ಯುವಜನರು ಆರೋಗ್ಯಕರ ಹಾಗೂ ಜವಾಬ್ದಾರಿಯುತ ಜೀವನ ನಡೆಸುವಂತೆ ಪ್ರೇರೇಪಿಸುವುದು ಅಭಿಯಾನದ ಉದ್ದೇಶವಾಗಿದೆ.

ಪೋಷಕರು, ವಿದ್ಯಾರ್ಥಿಗಳು, ಯುವಜನರು, ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಆಯೋಜಕರು ಮನವಿ ಮಾಡಿದ್ದಾರೆ.



ಬೆಂಗಳೂರು ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್ತಿಗೆ ನಡೆಯಲಿರುವ ಚುನಾವಣೆಯ ಎನ್ ಡಿಎ ಮೈತ್ರಿಕೂಟದ ಅಭ್ಯರ್ಥಿ ಶ್ರೀ ಎಪಿ ರಂಗನಾಥ್ ಅವರು ನಾಮಪತ್ರ ಸಲ್ಲಿಸಿದ ಸಂದರ್ಭದಲ್ಲಿ ಕೇಂದ್ರ ಸಚಿವರಾದ ಶ್ರೀ ಹೆಚ್.ಡಿ. ಕುಮಾರಸ್ವಾಮಿ ಅವರು ಉಪಸ್ಥಿತರಿದ್ದರು. ರಾಜ್ಯ ವಿಧಾನಸಭೆ ಪ್ರತಿಪಕ್ಷ ನಾಯಕರಾದ ಶ್ರೀ ಆರ್ ಅಶೋಕ್ ಅವರು, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರಾದ ಶ್ರೀ ಕೃಷ್ಣಾರೆಡ್ಡಿ ಅವರು, ಬಿಜೆಪಿ ರಾಜ್ಯಾಧ್ಯಕ್ಷರಾದ ಶ್ರೀ ಬಿ.ವೈ. ವಿಜಯೇಂದ್ರ ಅವರು ಸೇರಿದಂತೆ ಜೆಡಿಎಸ್-ಬಿಜೆಪಿ ಪಕ್ಷಗಳ ಅನೇಕ ಮುಖಂಡರು, ಶಾಸಕರು,ಮಾಜಿ ಶಾಸಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಚೆಕ್ ಬೌನ್ಸ್ ಪ್ರಕರಣದಲ್ಲಿ ರಾಜ್‌ಪಾಲ್ ಯಾದವ್‌ಗೆ ಸುಪ್ರೀಂ ಛೀಮಾರಿ

● ವಿಕ್ರಮ ವಾಹಿನಿ | ನವದೆಹಲಿ

ದೀರ್ಘಕಾಲದ ಚೆಕ್ ಬೌನ್ಸ್ ಪ್ರಕರಣದಲ್ಲಿ ಬಾಲಿವುಡ್ ನಟ ರಾಜ್‌ಪಾಲ್ ಯಾದವ್ ಅವರಿಗೆ ಸುಪ್ರೀಂ ಕೋರ್ಟ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದೆ. ಖಾಸಗಿ ಸಂಸ್ಥೆಗೆ ಬಾಕಿ ಮೊತ್ತ ಪಾವತಿಸುವುದಾಗಿ ಭರವಸೆ ನೀಡಿದ್ದರೂ ಅದನ್ನು ಈಡೇರಿಸದ ಹಿನ್ನೆಲೆಯಲ್ಲಿ ನ್ಯಾಯಾಲಯ ಸೋಮವಾರ ಕಠಿಣವಾಗಿ ತರಾಟೆಗೆ ತೆಗೆದುಕೊಂಡಿತು.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್ಮಲ್ಯ ಬಾಗ್ಚಿ ಹಾಗೂ ವಿ.ಮೋಹನ್ ಅವರಿದ್ದ ಪೀಠವು ಪ್ರಕರಣದ ವಿಚಾರಣೆ ನಡೆಸಿತು. ಸೆ.15ರಂದು ಬಾಕಿ ಮೊತ್ತ ಪಾವತಿಸಲು ಸ್ಪಷ್ಟ ಪ್ರಸ್ತಾವನೆ ಸಲ್ಲಿಸುವಂತೆ ಯಾದವ್ ಅವರಿಗೆ ಎರಡು ವಾರಗಳ ಅಂತಿಮ ಗಡುವು ನೀಡಲಾಗಿತ್ತು. ಅಲ್ಲದೆ, ಸುಪ್ರೀಂ ಕೋರ್ಟ್ ರಿಜಿಸ್ಟ್ರಿಯಲ್ಲಿ 2 ಕೋಟಿ ಠೇವಣಿ ಇಡುವಂತೆ ಸೂಚಿಸಲಾಗಿತ್ತು.

ಆದರೆ ಗಡುವು ಮುಗಿದರೂ ಅ.5ರವರೆಗೆ ಯಾವುದೇ ಪಾವತಿ ಮಾಡದಿರುವುದನ್ನು ಪೀಠ ಗಮನಿಸಿತು. ಯಾದವ್ ಅವರ ಮೇಲ್ಮನವಿಯನ್ನು ವಜಾಗೊಳಿಸುವ ಸಾಧ್ಯತೆಯನ್ನೂ ನ್ಯಾಯಾಲಯ ವ್ಯಕ್ತಪಡಿಸಿತು.

ವಿಚಾರಣೆ ವೇಳೆ ದೂರುದಾರರು ಬಡವರಲ್ಲ ಎಂದು ಯಾದವ್ ಪರ ವಕೀಲರು ಹೇಳಿದಾಗ ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಬಾಕಿ ಹಣ ಪಾವತಿಸದೆ ಇರುವ ಪರಿಸ್ಥಿತಿಯಲ್ಲಿ ಇಂತಹ ವಾದ ಸರಿಯಲ್ಲ ಎಂದು ನ್ಯಾಯಾಲಯ ತಿಳಿಸಿ, ಪ್ರಕರಣದಲ್ಲಿ ನಟನ ನಡೆಗೆ ಕಠಿಣವಾಗಿ ಆಕ್ಷೇಪಿಸಿತು.

## ಜಗಳ ಬಿಡಿಸಲು ಹೋದ ಪೊಲೀಸರ ಮೇಲೆಯೇ ಹಲ್ಲೆ

● ವಿಕ್ರಮ ವಾಹಿನಿ | ದೇವನಹಳ್ಳಿ

ಕುಡಿದ ಮತ್ತಿನಲ್ಲಿ ಜಗಳವಾಡುತ್ತಿದ್ದವರನ್ನು ಬಿಡಿಸಲು ಹೋದ 112 ಪೊಲೀಸ್ ಸಿಬ್ಬಂದಿ ಮೇಲೆಯೇ ಇಬ್ಬರು ಹಲ್ಲೆ ನಡೆಸಿದ ಘಟನೆ ದೊಡ್ಡಬಳ್ಳಾಪುರ ತಾಲೂಕಿನ ಪಾಲನಜೋಗಹಳ್ಳಿಯಲ್ಲಿ ನಡೆದಿದೆ.

ಹರಹಾನ್ ಸಾರಿಹಾನ್ ಹಾಗೂ ಬಸೀರ್ ಅಲಿಯಾಸ್ ಗಿಡ್ಡ ಎಂಬವರು ಪೊಲೀಸರಾದ ಮಣಿಕಂಠ ಮತ್ತು ರಾಯಪ್ಪ ಪೂಜಾರಿ ಮೇಲೆ ಹಲ್ಲೆ ನಡೆಸಿದ್ದು, ಅವರ ಎದೆ, ಕೈಕಾಲುಗಳಿಗೆ ಗಾಯಗಳಾಗಿವೆ. ಗಾಯಾಳುಗಳಿಗೆ ದೊಡ್ಡಬಳ್ಳಾಪುರ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ದೊಡ್ಡಬಳ್ಳಾಪುರ ಗ್ರಾಮಾಂತರ ಪೊಲೀಸರು ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ.

## ದೆಹಲಿಯಲ್ಲಿ ಪತ್ರಕರ್ತರ ಮೇಲೆ ಹಲ್ಲೆ, ಮಹಿಳಾ ಪತ್ರಕರ್ತೆಗೆ ಕಿರುಕುಳ: ಕೆಯುಡಬ್ಲ್ಯೂಜೆ ಖಂಡನೆ

● ವಿಕ್ರಮ ವಾಹಿನಿ | ಬೆಂಗಳೂರು



ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆಯ ವರದಿಗೆ ತೆರಳಿದ್ದ ಪತ್ರಕರ್ತರ ಮೇಲೆ ನಡೆದ ಹಲ್ಲೆ ಹಾಗೂ ಮಹಿಳಾ ಪತ್ರಕರ್ತೆಯೊಬ್ಬರಿಗೆ ಪೊಲೀಸ್ ಅಧಿಕಾರಿಯಿಂದ ಲೈಂಗಿಕ ಕಿರುಕುಳ ನೀಡಿರುವ ಘಟನೆಯನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ತೀವ್ರವಾಗಿ ಖಂಡಿಸಿದೆ.

ಪ್ರತಿಭಟನೆಯ ವರದಿಗೆ ತೆರಳಿದ್ದ ಪತ್ರಕರ್ತರ ಮೇಲೆ ಹಲ್ಲೆ ನಡೆಸಿರುವುದು ಹಾಗೂ ಮಹಿಳಾ ಪತ್ರಕರ್ತೆಯೊಂದಿಗೆ ಅನುಚಿತವಾಗಿ ವರ್ತಿಸಿರುವುದು ಖಂಡನೀಯ. ಪತ್ರಕರ್ತರು ತಮ್ಮ ವೃತ್ತಿಪರ ಕರ್ತವ್ಯ ನಿರ್ವಹಿಸುವ ಸಂದರ್ಭದಲ್ಲಿ ಇಂತಹ ಘಟನೆಗಳು ನಡೆದಿರುವುದು ಆತಂಕಕಾರಿ ಎಂದು ಸಂಘ ಆಕ್ರೋಶ ವ್ಯಕ್ತಪಡಿಸಿದೆ.

ಪತ್ರಕರ್ತರ ಮೇಲೆ ಹಲ್ಲೆ ನಡೆಸಿದ ಹಾಗೂ ಮಹಿಳಾ ಪತ್ರಕರ್ತೆಗೆ ಕಿರುಕುಳ ನೀಡಿದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಪತ್ರಕರ್ತರಿಗೆ ವೃತ್ತಿಪರ ಕರ್ತವ್ಯ ನಿರ್ವಹಿಸಲು ಸುರಕ್ಷಿತ ವಾತಾವರಣ ಕಲ್ಪಿಸಬೇಕು ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಆಗ್ರಹಿಸಿದ್ದಾರೆ.

## 'ಏಷ್ಯನ್ ಗೇಮ್ಸ್ ಪದಕ ವಿಜೇತರಿಗೆ ರೂ 1 ಕೋಟಿ ನಗದು ಬಹುಮಾನ ನೀಡಿ'

● ವಿಕ್ರಮ ವಾಹಿನಿ | ಬೆಂಗಳೂರು



ಏಷ್ಯನ್ ಗೇಮ್ಸ್‌ನಲ್ಲಿ ಪದಕ ಗೆದ್ದು ರಾಜ್ಯಕ್ಕೆ ಕೀರ್ತಿ ತಂದ ಕರ್ನಾಟಕದ ಕ್ರೀಡಾಪಟುಗಳಿಗೆ ನೀಡಲಾಗುತ್ತಿರುವ ನಗದು ಪುರಸ್ಕಾರ ಮೊತ್ತವನ್ನು ಹೆಚ್ಚಿಸುವಂತೆ ವಿಧಾನ ಪರಿಷತ್ ಸದಸ್ಯ ಹಾಗೂ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದಾರೆ.

ಏಷ್ಯನ್ ಗೇಮ್ಸ್‌ನಲ್ಲಿ ಕರ್ನಾಟಕದ ಎಂಟು ಕ್ರೀಡಾಪಟುಗಳು ವಿವಿಧ ವಿಭಾಗಗಳಲ್ಲಿ ಒಟ್ಟು 10 ಪದಕಗಳನ್ನು ಗೆದ್ದು ಸಾಧನೆ ಮಾಡಿದ್ದಾರೆ. ಎಂ.ಆರ್. ಪೂವಮ್ಮ, ಪ್ರಣವಿ ಅರಸ್, ಶ್ರೇಯಾಂಕಾ ಪಾಟೀಲ್, ಮೋಹಿತ್ ಎಚ್.ಎಸ್., ಅದಿತಿ ಅಶೋಕ್, ತಿಲೋತ್ತಮಾ ಸೇನ್, ಸ್ನೇಹಾ ಹಾಗೂ ಆಯುಷ್ ಶೆಟ್ಟಿ ಪದಕ ವಿಜೇತರಾಗಿದ್ದಾರೆ.

ಪ್ರಸ್ತುತ ರಾಜ್ಯದಲ್ಲಿ ಏಷ್ಯನ್ ಹಾಗೂ ಕಾಮನ್‌ವೆಲ್ತ್ ಗೇಮ್ಸ್‌ನ ಚಿನ್ನ, ಬೆಳ್ಳಿ ಮತ್ತು ಕಂಚಿನ ಪದಕ ವಿಜೇತರಿಗೆ ಕ್ರಮವಾಗಿ ರೂ 35 ಲಕ್ಷ, ರೂ 25 ಲಕ್ಷ ಹಾಗೂ ರೂ 15 ಲಕ್ಷ ನಗದು ಬಹುಮಾನ ನೀಡಲಾಗುತ್ತಿದೆ.

ಇತರ ರಾಜ್ಯಗಳಿಗೆ ಹೋಲಿಸಿದರೆ ಈ ಮೊತ್ತವನ್ನು ಪರಿಷ್ಕರಿಸುವ ಅಗತ್ಯವಿದೆ ಎಂದು ಗೂಳಿಗೌಡ ತಿಳಿಸಿದ್ದಾರೆ.

ಚಿನ್ನದ ಪದಕ ವಿಜೇತರಿಗೆ ರೂ 1 ಕೋಟಿ, ಬೆಳ್ಳಿ ಪದಕ ವಿಜೇತರಿಗೆ ರೂ 50 ಲಕ್ಷ ಹಾಗೂ ಕಂಚಿನ ಪದಕ ವಿಜೇತರಿಗೆ ರೂ 25 ಲಕ್ಷ ನಗದು ಪುರಸ್ಕಾರ ನೀಡುವಂತೆ ಅವರು ಮನವಿ ಮಾಡಿದ್ದಾರೆ.

ಅಲ್ಲದೆ, ಎಲ್ಲ ಎಂಟು ಕ್ರೀಡಾಪಟುಗಳನ್ನು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸನ್ಮಾನಿಸಿ, ಮುಂಬರುವ ರಾಜ್ಯೋತ್ಸವ ಪ್ರಶಸ್ತಿಗೆ ವಿಶೇಷ ಆದ್ಯತೆ ನೀಡುವಂತೆಯೂ ಕೋರಿದ್ದಾರೆ.

## 'ಫಾರ್ಮ್-7 ಅರ್ಜಿದಾರರ ವಿರುದ್ಧ ಕ್ರಿಮಿನಲ್ ಕೇಸ್ ಸಾಧ್ಯವಿಲ್ಲ'

● ವಿಕ್ರಮ ವಾಹಿನಿ | ಬೆಂಗಳೂರು

ಮತದಾರರ ಪಟ್ಟಿಗೆ ಸಂಬಂಧಿಸಿದ ಫಾರ್ಮ್-7 ಅರ್ಜಿ ಸಲ್ಲಿಸಿದವರ ವಿರುದ್ಧ ಪೊಲೀಸರು ಅಥವಾ ಸರ್ಕಾರ ನೇರವಾಗಿ ಕ್ರಿಮಿನಲ್ ಪ್ರಕರಣ ದಾಖಲಿಸಲು ಅವಕಾಶವಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಕೇಂದ್ರ ಚುನಾವಣಾ ಆಯೋಗಕ್ಕೆ ಭೇಟಿ ನೀಡಿ ದೂರು ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫಾರ್ಮ್-7 ಅರ್ಜಿಗಳ ಕುರಿತು ಚುನಾವಣಾ ಆಯೋಗದಿಂದ ಸ್ಪಷ್ಟನೆ ಪಡೆದಿರುವುದಾಗಿ ತಿಳಿಸಿದರು. ನಿಯಮ 20ರಡಿ ಅರ್ಜಿಗಳ ಕುರಿತು ತನಿಖೆ ನಡೆಸಿ ಕ್ರಮ ಕೈಗೊಳ್ಳಲು ಅವಕಾಶವಿದ್ದು, ನಿಯಮ 31ರ ಪ್ರಕಾರ ಕ್ರಿಮಿನಲ್ ಪ್ರಕರಣ ದಾಖಲಿಸುವ ಅಧಿಕಾರ ಪೊಲೀಸರಿಗೆ ಇಲ್ಲ. ಅಗತ್ಯವಿದ್ದರೆ ನ್ಯಾಯಾಲಯದ ಮೊರೆ ಹೋಗಬೇಕಾಗುತ್ತದೆ ಎಂದರು.

ಫಾರ್ಮ್-7 ವಿಚಾರವು ಅರ್ಜಿ ಸಲ್ಲಿಸಿದವರು ಹಾಗೂ ಚುನಾವಣಾ ಆಯೋಗದ ನಡುವಿನ ಪ್ರಕ್ರಿಯೆಯಾಗಿದ್ದು, ಸರ್ಕಾರ ಅಥವಾ ಪೊಲೀಸರು ಮಧ್ಯಪ್ರವೇಶಿಸಬಾರದು. ಈ ಕುರಿತು ಚುನಾವಣಾ ಆಯೋಗದಿಂದ ಸ್ಪಷ್ಟ ಸುತ್ತೋಲೆ ಹೊರಡಿಸುವಂತೆ ಮನವಿ ಮಾಡಲಾಗಿದೆ ಎಂದು ಹೇಳಿದರು.



ಮತದಾರರ ಪಟ್ಟಿಯಿಂದ ಹೆಸರು ಕೈಬಿಡುವ ವಿಚಾರದಲ್ಲಿ ಕಾಂಗ್ರೆಸ್ ನಾಯಕರು ಅನಗತ್ಯ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ಆರೋಪಿಸಿದ ಅಶೋಕ, ಹಿಂದೂಗಳ ಮತಗಳೂ ರದ್ದಾಗಿವೆ ಎಂದು ದೂರಿದರು. ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ತಾವು ಕಾನೂನು ಕೈಗೆ ತೆಗೆದುಕೊಳ್ಳದೆ ಸಂವಿಧಾನಬದ್ಧವಾಗಿ ಹೋರಾಟ ನಡೆಸುವುದಾಗಿ ತಿಳಿಸಿದರು.

## ಕೆಪಿಎಸ್‌ಸಿ ಅಂಕಗಳ ಮಾಹಿತಿ ತಡೆದು ಲಂಚದ ಮಾತುಕತೆ: ಇಡಿ

● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕ ಲೋಕಸೇವಾ ಆಯೋಗದ (ಕೆಪಿಎಸ್‌ಸಿ) ನೇಮಕಾತಿ ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳ ಅಂಕಗಳ ಮಾಹಿತಿಯನ್ನು ಉದ್ದೇಶಪೂರ್ವಕವಾಗಿ ಬಹಿರಂಗಪಡಿಸದೆ, ಅದನ್ನು ಲಂಚದ ಮಾತುಕತೆಗೆ ಬಳಸಲಾಗುತ್ತಿತ್ತು ಎಂಬ ಗಂಭೀರ ಆರೋಪ ತನಿಖೆಯಲ್ಲಿ ಬೆಳಕಿಗೆ ಬಂದಿದೆ ಎಂದು ಜಾರಿ ನಿರ್ದೇಶನಾಲಯ (ಇಡಿ) ವಿಶೇಷ ನ್ಯಾಯಾಲಯಕ್ಕೆ ತಿಳಿಸಿದೆ.

2024ರಿಂದ 2026ರವರೆಗೆ ಕೆಪಿಎಸ್‌ಸಿ ಪರೀಕ್ಷಾ ನಿಯಂತ್ರಕರಾಗಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅವರ ಅವಧಿಯಲ್ಲಿ ನಡೆದ 13 ನೇಮಕಾತಿ ಪ್ರಕ್ರಿಯೆಗಳಲ್ಲೂ ಅಕ್ರಮ ಹಣ ವಸೂಲಿ ನಡೆದಿದೆಯೇ ಎಂಬುದರ ಕುರಿತು ತನಿಖೆ ಅಗತ್ಯವಿದೆ ಎಂದು ಇಡಿ ವಾದಿಸಿದೆ.

ಪ್ರತಿ ಹುದ್ದೆಗೆ ಮೂವರು ಅಭ್ಯರ್ಥಿಗಳಿರುವ 1:3 ಅರ್ಹತಾ ಪಟ್ಟಿಯಲ್ಲಿ ಹೆಸರು ಹಾಗೂ ರೋಲ್ ನಂಬರ್ ಪ್ರಕಟಿಸಲಾಗುತ್ತಿತ್ತು. ಆದರೆ ಅಂಕಗಳನ್ನು ಬಹಿರಂಗಪಡಿಸದ ಕಾರಣ ಅಭ್ಯರ್ಥಿಗಳ ನಿಖರ ಸ್ಥಾನಮಾನ ಸಾರ್ವಜನಿಕರಿಗೆ ತಿಳಿಯುತ್ತಿರಲಿಲ್ಲ. ಕೆಪಿಎಸ್‌ಸಿಯ ಕೆಲವರು ಗಂಗ್ವಾರ್ ಅವರಿಂದ ಅಭ್ಯರ್ಥಿಗಳ ಅಂಕ ಹಾಗೂ ಆಯ್ಕೆಯ ಸಾಧ್ಯತೆಗಳ ಮಾಹಿತಿ ಪಡೆಯುತ್ತಿದ್ದರು ಎಂದು ಇಡಿ ಆರೋಪಿಸಿದೆ. ಬಳಿಕ ಅಭ್ಯರ್ಥಿಗಳನ್ನು ಸಂಪರ್ಕಿಸಿ ಲಂಚದ ಮೊತ್ತದ ಬಗ್ಗೆ ಮಾತುಕತೆ ನಡೆಸಲಾಗುತ್ತಿತ್ತು. ಆಯ್ಕೆಯ ಸಾಧ್ಯತೆ ಹೆಚ್ಚಿದ್ದ ಅಭ್ಯರ್ಥಿಗಳಿಂದ ಹೆಚ್ಚಿನ ಮೊತ್ತಕ್ಕೆ ಬೇಡಿಕೆ ಇಡಲಾಗುತ್ತಿತ್ತು ಎಂದು ತನಿಖಾ ಸಂಸ್ಥೆ ನ್ಯಾಯಾಲಯಕ್ಕೆ ತಿಳಿಸಿದೆ.

400 ಪಶುವೈದ್ಯಾಧಿಕಾರಿಗಳ ನೇಮಕಾತಿಗಾಗಿ 2026ರ ಜನವರಿ 8 ಮತ್ತು 9ರಂದು ನಡೆದ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಗಂಗ್ವಾರ್ ಪ್ರಮುಖ ಆರೋಪಿಯಾಗಿದ್ದಾರೆ. ಮಧ್ಯವರ್ತಿಯೊಬ್ಬರು ಕನಿಷ್ಠ 20 ಅಭ್ಯರ್ಥಿಗಳಿಂದ ತಲಾ ರೂ 20ರಿಂದ ರೂ 40 ಲಕ್ಷದವರೆಗೆ ಹಣ ಸಂಗ್ರಹಿಸಿದ್ದರೆಂಬ ಆರೋಪವೂ ಇದೆ. ಫೆಬ್ರವರಿ 4ರಂದು 1:3 ಅರ್ಹತಾ ಪಟ್ಟಿ ಪ್ರಕಟವಾದ ಬಳಿಕ ಕೆಲ ಕೆಪಿಎಸ್‌ಸಿ ಅಧಿಕಾರಿಗಳು ಹಾಗೂ ಸದಸ್ಯರು ಅಭ್ಯರ್ಥಿಗಳ ಆಯ್ಕೆಯ ಸಾಧ್ಯತೆ ತಿಳಿಯಲು ಗಂಗ್ವಾರ್ ಅವರನ್ನು ಸಂಪರ್ಕಿಸಿದ್ದರು ಎಂದು ಇಡಿ ತಿಳಿಸಿದೆ. ಅವರ ಅಧಿಕಾರಾವಧಿಯಲ್ಲಿ ನಡೆದ ಇತರ ನೇಮಕಾತಿ ಪ್ರಕ್ರಿಯೆಗಳಲ್ಲೂ ಅಕ್ರಮ ಹಣದ ವಹಿವಾಟು ನಡೆದಿದೆಯೇ ಎಂಬ ಬಗ್ಗೆ ಸಮಗ್ರ ತನಿಖೆ ಅಗತ್ಯವಿದೆ ಎಂದು ಇಡಿ ವಾದಿಸಿದೆ.

ಆದರೆ, ಉಳಿದ ನೇಮಕಾತಿಗಳಿಗೆ ಪ್ರತ್ಯೇಕ ಎಫ್‌ಐಆರ್ ದಾಖಲಾಗಿಲ್ಲದ ಹಿನ್ನೆಲೆಯಲ್ಲಿ ಪಿಎಂಎಲ್‌ಎ ಅಡಿ ತನಿಖೆಯ ವ್ಯಾಪ್ತಿಯನ್ನು ಪಶುವೈದ್ಯಾಧಿಕಾರಿ ನೇಮಕಾತಿ ಪ್ರಕರಣಕ್ಕೆ ಮಾತ್ರ ಸೀಮಿತಗೊಳಿಸಬೇಕು ಎಂದು ವಕೀಲರು ವಾದಿಸಿದ್ದಾರೆ.

## ಆಕಾಶದಲ್ಲಿ ಯೋಧನ ಜೀವ ಉಳಿಸಿದ ಪುತ್ತೂರು ವೈದ್ಯ

● ವಿಕ್ರಮ ವಾಹಿನಿ | ಬೆಂಗಳೂರು



ಪುತ್ತೂರಿನ ಎಂಭತ್ತು ರೂಪಾಯಿ ವೈದ್ಯರೆಂದೇ ಪ್ರಚಲಿತದಲ್ಲಿರುವ ಪರಶುರಾಮ ನಾಡಿನ ವೈದ್ಯ ಡಾ. ಶ್ರೀಕುಮಾರ್ ಕತ್ರಿಬೈಲು ಅವರು ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ವೇಳೆ ಯೋಧನ ಜೀವ ಉಳಿಸಿ ನಿಜವಾದ ಮಾನವೀಯತೆ ಮೆರೆದಿದ್ದಾರೆ. ಇಂಡಿಗೋ ವಿಮಾನವು ಲಕ್ನೋದಿಂದ ಮುಂಬೈಗೆ ತೆರಳುತ್ತಿತ್ತು. ಈ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ವೇಳೆ ನೌಕಾಪಡೆಯಲ್ಲಿ ಸೇವೆ ಸಲ್ಲಿಸಿದ್ದ ವ್ಯಕ್ತಿಗೆ ಎದೆನೋವು ಕಾಣಿಸಿಕೊಂಡು ತೀವ್ರ ಉಸಿರಾಟದ ತೊಂದರೆ ಅನುಭವಿಸುತ್ತಿದ್ದರು. ತಕ್ಷಣವೇ ವಿಮಾನ ಸಿಬ್ಬಂದಿಯವರು 'ಈ ವಿಮಾನದಲ್ಲಿ ಯಾರಾದರೂ ಡಾಕ್ಟರ್ ಇದ್ದಾರೆಯೇ?' ಎಂದು ಕೇಳಿದ್ದಾರೆ. ಕೂಡಲೇ ಡಾ. ಕತ್ರಿಬೈಲು ಅವರು ನಾನು ವೈದ್ಯನಿದ್ದೇನೆ ಎಂದಿದ್ದಾರೆ. ಅವರೂ ಕೂಡ ತತ್ ಕ್ಷಣ ಜಾಗೃತರಾಗಿ ಜೀವನ್ಮರಣ ಹೋರಾಟ ನಡೆಸುತ್ತಿದ್ದ ಆ ಯೋಧನಿಗೆ ಗೋಲ್ಡನ್ ಅವರ್‌ನಲ್ಲಿ ಪ್ರಥಮ ಚಿಕಿತ್ಸೆ ನೀಡಿ ಪ್ರಾಣ ಉಳಿಸಿದ್ದಾರೆ.

ಸುಮಾರು 35 ಸಾವಿರ ಅಡಿ ಎತ್ತರದಲ್ಲಿ ಹಾಡುತ್ತಿದ್ದ ವಿಮಾನದಲ್ಲಿ ಯಾವುದೇ ವೈದ್ಯ ಸೌಲಭ್ಯಗಳಿಲ್ಲದೆ ಕೇವಲ ತಮ್ಮ ಅನುಭವದ ಆಧಾರದ ಮೇಲೆ ಅಗತ್ಯ ಚಿಕಿತ್ಸೆ ನೀಡಿ ಮುಂಬೈ ಮೂಲದ ಆ ವ್ಯಕ್ತಿಯನ್ನು ಬದುಕಿಸಿದ ಅತ್ಯಂತ ಮನಮಿಡಿಯುವ ಘಟನೆಯಾಗಿದೆ.

# ರಾಜ್ಯದಲ್ಲಿ ಎಸ್‌ಐಆರ್ ಸಮರ!

1ನೇ ಪುಟದಿಂದ

ಎಂಟು ಮತಗಟ್ಟೆಗಳಲ್ಲಿ ಈ ಅರ್ಜಿಗಳು ಸಲ್ಲಿಕೆಯಾಗಿರುವುದಾಗಿ ದೂರಿನಲ್ಲಿ ಉಲ್ಲೇಖಿಸಲಾಗಿದೆ. ಪ್ರಕರಣದಲ್ಲಿ ಬಿಜೆಪಿ ಸದಸ್ಯೆ ಜಿ.ಎಸ್.ವಸಂತಲಕ್ಷ್ಮಿ ಅವರ ಹೆಸರನ್ನು ಆರೋಪಿಯಾಗಿ ದಾಖಲಿಸಲಾಗಿದ್ದು, ಅರ್ಜಿಗಳ ನೈಜತೆ ಹಾಗೂ ಸಹಿಗಳ ಕುರಿತು ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಆರೋಪಗಳು ಇನ್ನೂ ಸಾಬೀತಾಗಿಲ್ಲ. ಬಳ್ಳಾರಿಯಲ್ಲೂ 7,561 ಮತದಾರರ ಹೆಸರುಗಳನ್ನು ಅಳಿಸಲು ಯತ್ನಿಸಿದ ಆರೋಪದಲ್ಲಿ ಬಿಜೆಪಿ ಬಿಎಲ್‌ಎ-1 ಸೇರಿದಂತೆ ಕೆಲವರ ವಿರುದ್ಧ ಪ್ರಕರಣ ದಾಖಲಾಗಿದೆ. ಕಾಂಗ್ರೆಸ್ ಬಿಎಲ್‌ಎ ನೀಡಿದ ದೂರಿನ ಆಧಾರದ ಮೇಲೆ ಈ ಕ್ರಮ ಕೈಗೊಳ್ಳಲಾಗಿದೆ.

**ಚುನಾವಣಾ ಆಯೋಗದ ಸ್ಪಷ್ಟನೆ:** ರಾಜಕೀಯ ಪಕ್ಷಗಳ ಆರೋಪಗಳ ನಡುವೆ ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ಮಹತ್ವದ ಸ್ಪಷ್ಟನೆ ನೀಡಿದ್ದಾರೆ. ಅಕ್ಟೋಬರ್ 4ರವರೆಗೆ ಖಖಖ ಪ್ರಕ್ರಿಯೆಯಲ್ಲಿ ಒಟ್ಟು 91,278 ಫಾರ್ಮ್-7 ಅರ್ಜಿಗಳು ಸ್ವೀಕರಿಸಲಾಗಿದ್ದು, ಫಾರ್ಮ್-7 ಅರ್ಜಿ ಸಲ್ಲಿಕೆಯಾಗಿದೆ ಎಂಬ ಕಾರಣಕ್ಕೆ ಮಾತ್ರ ಯಾವುದೇ ಮತದಾರರ ಹೆಸರನ್ನು ಅಳಿಸಲಾಗಿಲ್ಲ ಎಂದು ಅವರು ತಿಳಿಸಿದ್ದಾರೆ. ಹೆಸರು ತೆಗೆದುಹಾಕುವ ಮೊದಲು ಸಂಬಂಧಪಟ್ಟ ಮತದಾರರಿಗೆ ನೋಟಿಸ್ ನೀಡಿ, ಆಕ್ಷೇಪಣೆ ಸಲ್ಲಿಸಿದವರನ್ನೂ ವಿಚಾರಿಸಿ, ದಾಖಲೆಗಳನ್ನು ಪರಿಶೀಲಿಸಿದ ಬಳಿಕವೇ ನಿರ್ಧಾರ ಕೈಗೊಳ್ಳಲಾಗುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿ SIR ಅಡಿಯಲ್ಲಿ 43,82,313 ನೋಟಿಸ್‌ಗಳನ್ನು ಸೃಷ್ಟಿಸಲಾಗಿದ್ದು, ಅವುಗಳಲ್ಲಿ 43,55,818 ನೋಟಿಸ್‌ಗಳನ್ನು ವಿತರಿಸಲಾಗಿದೆ. ಸುಮಾರು 36.89 ಲಕ್ಷ ಪ್ರಕರಣಗಳಲ್ಲಿ ವಿಚಾರಣೆ ಪೂರ್ಣಗೊಂಡಿದ್ದು, ಉಳಿದ ಪ್ರಕರಣಗಳ ವಿಚಾರಣೆ ಮುಂದುವರಿದಿದೆ. ಅಕ್ಟೋಬರ್ 12ರಂದು ಕೊನೆಯ ವಿಚಾರಣೆ ನಡೆಯಲಿದ್ದು, ಅಕ್ಟೋಬರ್ 22ರಂದು ಹಕ್ಕು ಮತ್ತು ಆಕ್ಷೇಪಣೆಗಳ ವಿಲೇವಾರಿಗೆ ಕೊನೆಯ ದಿನವಾಗಿದೆ.

ಸಾಮೂಹಿಕವಾಗಿ ಫಾರ್ಮ್-7 ಸಲ್ಲಿಸಿರುವ ಆರೋಪಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲ 224 ವಿಧಾನಸಭಾ ಕ್ಷೇತ್ರಗಳಲ್ಲೂ ಪರಿಶೀಲನೆ ನಡೆಸಲು ಚುನಾವಣಾ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಸುಳ್ಳು ಮಾಹಿತಿ ಅಥವಾ ಸುಳ್ಳು ಘೋಷಣೆಯನ್ನು ಉದ್ದೇಶಪೂರ್ವಕವಾಗಿ ಸಲ್ಲಿಸಿರುವುದು ತನಿಖೆಯಲ್ಲಿ ದೃಢಪಟ್ಟರೆ ಕಾನೂನು ಕ್ರಮ ಕೈಗೊಳ್ಳುವಂತೆ ಮುಖ್ಯ ಚುನಾವಣಾಧಿಕಾರಿ ಸೂಚಿಸಿದ್ದಾರೆ.

ಚುನಾವಣಾ ಆಯೋಗದ ಈ ನಿಲುವು ರಾಜಕೀಯ ಪಕ್ಷಗಳ ಆರೋಪಗಳಿಗೆ ಮಧ್ಯಮ ಮಾರ್ಗದ ಉತ್ತರ ನೀಡಿದಂತಾಗಿದೆ. ಒಂದು ಕಡೆ ಫಾರ್ಮ್-7 ಮೂಲಕ ಅರ್ಹ ಮತದಾರರನ್ನು ಗುರಿಯಾಗಿಸಿ ಹೆಸರು ಅಳಿಸುವ ಪ್ರಯತ್ನ ನಡೆದಿದ್ದರೆ ತಪ್ಪಿತಸ್ಥರ ವಿರುದ್ಧ ಕ್ರಮ ಅನಿವಾರ್ಯ; ಮತ್ತೊಂದೆಡೆ ಕಾನೂನುಬದ್ಧವಾಗಿ ಸಲ್ಲಿಸಿರುವ ಆಕ್ಷೇಪಣೆಗಳನ್ನು ರಾಜಕೀಯ ಕಾರಣಕ್ಕಾಗಿ ಅಪರಾಧವೆಂದು ಪರಿಗಣಿಸಬಾರದು ಎಂಬ ಬಿಜೆಪಿಯ ವಾದವೂ ಪರಿಶೀಲನೆಗೆ ಒಳಪಡಬೇಕಾಗಿದೆ.

**ಎಸ್‌ಐಆರ್ ಈಗ ರಾಜಕೀಯ ಪರೀಕ್ಷೆ:** SIR ವಿವಾದ ಇದೀಗ ಮತದಾರರ ಪಟ್ಟಿ ಪರಿಷ್ಕರಣೆಯ ತಾಂತ್ರಿಕ ಪ್ರಕ್ರಿಯೆಯನ್ನು ಮೀರಿ ರಾಜಕೀಯ ವಿಶ್ವಾಸಾರ್ಹತೆಯ ಪ್ರಶ್ನೆಯಾಗಿ ಪರಿಣಮಿಸಿದೆ. ಕಾಂಗ್ರೆಸ್ ಪ್ರಕಾರ ಅರ್ಹ ಮತದಾರರ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಸಂಚು ನಡೆದಿದೆ; ಬಿಜೆಪಿ ಪ್ರಕಾರ ಚುನಾವಣಾ ಆಯೋಗದ ನಿಯಮಾನುಸಾರ ಸಲ್ಲಿಸಲಾದ ಅರ್ಜಿಗಳನ್ನು ನೆಪ ಮಾಡಿಕೊಂಡು ತನ್ನ ಕಾರ್ಯಕರ್ತರನ್ನು ಗುರಿಯಾಗಿಸಲಾಗುತ್ತಿದೆ.

ಇದರ ನಡುವೆ ಚುನಾವಣಾ ಆಯೋಗದ ಮುಂದಿರುವ ಪ್ರಮುಖ ಸವಾಲು ಅರ್ಹ ಮತದಾರರ ಹೆಸರನ್ನು ಯಾವುದೇ ಕಾರಣಕ್ಕೂ ಅನ್ಯಾಯವಾಗಿ ತೆಗೆದುಹಾಕದಿರುವುದು ಹಾಗೂ ಅನರ್ಹ ಹೆಸರುಗಳಿದ್ದರೆ ಕಾನೂನುಬದ್ಧವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳುವುದು. ಯಾವುದೇ ಪಕ್ಷದ ರಾಜಕೀಯ ಒತ್ತಡಕ್ಕೆ ಒಳಗಾಗದೆ ದಾಖಲೆ, ವಿಚಾರಣೆ ಮತ್ತು ಕಾನೂನು ಪ್ರಕ್ರಿಯೆಯ ಆಧಾರದ ಮೇಲೆ ನಿರ್ಧಾರ ಕೈಗೊಳ್ಳುವುದೇ ಈ ವಿವಾದಕ್ಕೆ ಶಾಶ್ವತ ಪರಿಹಾರವಾಗಲಿದೆ.

SIR ಪ್ರಕ್ರಿಯೆ ಅಂತಿಮ ಹಂತದತ್ತ ಸಾಗುತ್ತಿರುವ ಸಂದರ್ಭದಲ್ಲಿ ಫಾರ್ಮ್-7 ಅರ್ಜಿಗಳು, ಪೊಲೀಸ್ ಎಫ್‌ಐಆರ್‌ಗಳು, ಪಕ್ಷಗಳ ದೂರು-ಪ್ರತಿ ದೂರು ಹಾಗೂ ಚುನಾವಣಾ ಆಯೋಗದ ತನಿಖೆ-ಇವೆಲ್ಲವೂ ಕರ್ನಾಟಕದ ಮತದಾರರ ಪಟ್ಟಿಯ ಅಂತಿಮ ಸ್ವರೂಪದ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಹೀಗಾಗಿ ಮುಂದಿನ ದಿನಗಳಲ್ಲಿ ನಡೆಯಲಿರುವ ವಿಚಾರಣೆಗಳು ಮತ್ತು ತನಿಖಾ ವರದಿಗಳು ರಾಜಕೀಯವಾಗಿ ಮಾತ್ರವಲ್ಲ, ರಾಜ್ಯದ ಚುನಾವಣಾ ವ್ಯವಸ್ಥೆಯ ವಿಶ್ವಾಸಾರ್ಹತೆಯ ದೃಷ್ಟಿಯಿಂದಲೂ ಅತ್ಯಂತ ಮಹತ್ವ ಪಡೆದುಕೊಂಡಿವೆ.

## ಬೆಂಗಳೂರಿನಲ್ಲಿ ಧಾರಾಕಾರ ಮಳೆ

● ವಿಕ್ರಮ ವಾಹಿನಿ | ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಸೋಮವಾರ ರಾತ್ರಿ ಧಾರಾಕಾರ ಮಳೆ ಸುರಿದ ಪರಿಣಾಮ ಹಲವು ಪ್ರಮುಖ ರಸ್ತೆಗಳು ಜಲಾವೃತಗೊಂಡು, ವಾಹನ ಸಂಚಾರ ಅಸ್ತವ್ಯಸ್ತಗೊಂಡಿತು.

ಮೆಜೆಸ್ಟಿಕ್, ಮೈಸೂರು ಬ್ಯಾಂಕ್ ವೃತ್ತ, ಕಾರ್ಪೊರೇಷನ್, ಕೆ.ಆರ್.ಮಾರುಕಟ್ಟೆ, ಶಾಂತಿನಗರ ಸೇರಿದಂತೆ ನಗರದ ಹಲವು ಭಾಗಗಳಲ್ಲಿ ಭಾರಿ ಮಳೆಯಾಗಿದೆ. ಆನೇಕಲ್ ತಾಲೂಕಿನ ಅತ್ತಿಬೆಲೆ, ಚಂದಾಪುರ ಹಾಗೂ ಜಿಗಣಿ ಭಾಗಗಳಲ್ಲೂ ಮಳೆ ಅಬ್ಬರಿಸಿದೆ. ಕೆ.ಆರ್.ಮಾರುಕಟ್ಟೆ ಸೇರಿದಂತೆ ಕೆಲವೆಡೆ ರಸ್ತೆಯಲ್ಲಿ ಮಳೆನೀರು ಉಕ್ಕಿ ಹರಿದ ಪರಿಣಾಮ ವಾಹನ ಸವಾರರು ಹಾಗೂ ಪಾದಚಾರಿಗಳು ತೀವ್ರ ತೊಂದರೆ ಅನುಭವಿಸಿದರು.

## ಶ್ರೀಧನ್ವಂತರಿಯ ಪ್ರಸಾದ ಶ್ರೀ ಸತ್ಯಾತ್ಮ ತೀರ್ಥರಿಗೆ ಸಮರ್ಪಣೆ: ಶೀಘ್ರ ಚೇತರಿಕೆಗೆ ಪ್ರಾರ್ಥನೆ

● ವಿಕ್ರಮ ವಾಹಿನಿ | ಹುಬ್ಬಳ್ಳಿ

ಬೆಂಗಳೂರಿನ ಶ್ರೀ ಗಾಯತ್ರಿ ಸೇವಾ ಪ್ರತಿಷ್ಠಾನದ ಅಧ್ಯಕ್ಷರು ಹಾಗೂ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ, ಕರ್ನಾಟಕ ಸರ್ಕಾರದ ನಿಕಟಪೂರ್ವ ನಿರ್ದೇಶಕರಾದ ಬಿ.ಎಸ್. ರಾಘವೇಂದ್ರ ಭಟ್ ಅವರು ಕೇರಳದ ಪುರಾಣ ಪ್ರಸಿದ್ಧ ನೆಲ್ಲುವಾಯಿ ಶ್ರೀ ಧನ್ವಂತರಿ ಕ್ಷೇತ್ರದ ಶ್ರೀ ಧನ್ವಂತರಿ ದೇವರ ಪ್ರಸಾದವನ್ನು ಉತ್ತರಾಧಿ ಮಠದ ಶ್ರೀ 1008 ಸತ್ಯಾತ್ಮ ತೀರ್ಥ ಸ್ವಾಮೀಜಿಯವರಿಗೆ ಹುಬ್ಬಳ್ಳಿಯಲ್ಲಿ ಸಮರ್ಪಿಸಿ, ಶ್ರೀಗಳಿಂದ ಆಶೀರ್ವಾದ ಪಡೆದರು.

ಇತ್ತೀಚೆಗೆ ನಡೆದಿದ್ದ ರಸ್ತೆ ಅಪಘಾತ ವೊಂದರಲ್ಲಿ ಶ್ರೀಮನ್ನಾರಾಯಣನ ಕೃಪೆಯಿಂದ ಪಾರಾಗಿ ಪ್ರಸ್ತುತ ವಿಶ್ರಾಂತಿ ತೆಗೆದು ಕೊಳ್ಳುತ್ತಿರುವ ಶ್ರೀಗಳ ಆರೋಗ್ಯ ವಿಚಾರಿಸಿದ ರಾಘವೇಂದ್ರ ಭಟ್ ಅವರು ಶ್ರೀಗಳು ಶೀಘ್ರ ಗುಣಮುಖರಾಗಲಿ ಎಂದು ಪ್ರಾರ್ಥಿಸಿದರು.



ಈ ಸಂದರ್ಭದಲ್ಲಿ ಹಿರಿಯ ವಿದ್ವಾಂಸರಾದ ಶ್ರೀ ಸತ್ಯಧ್ಯಾನಾಚಾರ್ಯ ಕಟ್ಟಿಯವರು, ಖ್ಯಾತ ಜ್ಯೋತಿಷಿಗಳಾದ ಡಾ. ಪ್ರಸನ್ನಾಚಾರ್ ಕಟ್ಟಿ, ಪುರೋಹಿತ ಪರಿಷತ್‌ನ ಧಾರವಾಡ ಜಿಲ್ಲಾ ಅಧ್ಯಕ್ಷರಾದ ವಿನಾಯಕ ತಾಪಸ ಹಾಗೂ ಪರಿಷತ್ ಸದಸ್ಯರಾದ ಕಮಲೇಶ ಜೋಶಿ ಮತ್ತಿತರರು ಉಪಸ್ಥಿತರಿದ್ದರು.

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481
ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ

# ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನಲ್ಲಿ ವ್ಯಾಪಕ ಮಳೆ ನಿರೀಕ್ಷೆ

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕದ ಕರಾವಳಿ, ಮಲೆನಾಡು ಹಾಗೂ ದಕ್ಷಿಣ ಒಳನಾಡಿನ ವಿವಿಧ ಭಾಗಗಳಲ್ಲಿ ಇಂದು (ಸೋಮವಾರ) ಬೆಳ್ಳಂಬೆಳಗ್ಗೆ ಮೋಡ ಕವಿದ ವಾತಾವರಣವಿದ್ದು, ಭಾರೀ ಮಳೆಯಾಗುವ ಸಾಧ್ಯತೆ ಇದೆ. ಸೋಮವಾರ ಮಾತ್ರವಲ್ಲದೆ, ಮುಂದಿನ ನಾಲ್ಕು ದಿನಗಳ ಕಾಲ ರಾಜ್ಯದ 19 ಜಿಲ್ಲೆಗಳಲ್ಲಿ ಮಳೆ ಅಬ್ಬರ ಮುಂದುವರೆಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.

ರಾಜ್ಯದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ, ಕೊಡಗು, ಮೈಸೂರು, ಚಾಮರಾಜನಗರ, ಮಂಡ್ಯ, ರಾಮನಗರ, ಬೆಂಗಳೂರು, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಇಲಾಖೆ ತಿಳಿಸಿದೆ. ಈ ಜಿಲ್ಲೆಗಳಲ್ಲಿ ಗಾಳಿಯ ವೇಗವೂ ಗಂಟೆಗೆ ಸುಮಾರು 40 ಕಿ.ಮೀ. ವೇಗದಲ್ಲಿ ಬೀಸಲಿದೆ ಎಂದಿರುವ ಇಲಾಖೆ, ಹಲವು ಜಿಲ್ಲೆಗಳಿಗೆ ಹೈ–ಅಲರ್ಟ್ ಘೋಷಿಸಿದೆ.

ಮಲೆನಾಡಿನ ಭಾಗಗಳಾದ ಚಿಕ್ಕಮಗಳೂರು, ಶಿವಮೊಗ್ಗ, ಹಾಸನ ಹಾಗೂ ಕೊಡಗಿನಲ್ಲೂ ರಾತ್ರಿಯಿಡೀ ಧಾರಾಕಾರ ಮಳೆಯಾಗಿದೆ. ವಿಶೇಷವಾಗಿ ಮೂಡಿಗೆರೆ, ಕೊಟ್ಟಿಗೆಹಾರ, ಚಾರ್ಮಾಡಿ ಘಾಟ್, ಶೃಂಗೇರಿ, ಸಾಗರ, ಹೊಸನಗರ, ತೀರ್ಥಹಳ್ಳಿ, ಸಕಲೇಶಪುರ ಹಾಗೂ ಮಡಿಕೇರಿ ತಾಲೂಕುಗಳಲ್ಲಿ ಮಳೆಯ ಪ್ರಮಾಣ ಹೆಚ್ಚಿರಲಿದೆ.

ದಕ್ಷಿಣ ಒಳನಾಡಿನ ಬೆಂಗಳೂರು, ಮೈಸೂರು, ಮಂಡ್ಯ, ರಾಮನಗರ, ಚಾಮರಾಜನಗರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ, ದಾವಣಗೆರೆ ಹಾಗೂ ವಿಜಯನಗರ ಜಿಲ್ಲೆಗಳಲ್ಲಿ ಸಂಜೆ ಮತ್ತು ರಾತ್ರಿ ವೇಳೆಗೆ ಸಾಧಾರಣ ಮಳೆಯಾಗಲಿದೆ. ಅಂತೆಯೇ ಉತ್ತರ ಒಳನಾಡಿನ ಬೆಳಗಾವಿ, ಧಾರವಾಡ, ಬಾಗಲಕೋಟೆ, ಗದಗ, ಹಾವೇರಿ, ಕೊಪ್ಪಳ ಮತ್ತು ಬಳ್ಳಾರಿ ಭಾಗಗಳಲ್ಲಿ ಮೋಡಕವಿದ ವಾತಾವರಣವಿದ್ದು, ಅಲ್ಲಲ್ಲಿ ತುಂತುರು ಮಳೆಯಾಗಲಿದೆ ಎಂದು ಇಲಾಖೆ ಹೇಳಿದೆ.

ರಾತ್ರಿಯಿಂದ ಸುರಿಯುತ್ತಿರುವ ಮಳೆಯಿಂದಾಗಿ, ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಅಜ್ಜಿಬೆಟ್ಟು ಗ್ರಾಮದ ಅನಿಲ್ದಡ್ಡ ಎಂಬಲ್ಲಿ ಭೀಕರ ಸಿಡಿಲು ಬಡಿದು ನಾಗೇಶ್ ಕುಲಾಲ್ ಎಂಬುವವರ ಮನೆ ಸಂಪೂರ್ಣ ಖಜಂಗೊಂಡಿವೆ. ಸಿಡಿಲಿನ ತೀವ್ರತೆಗೆ ಮನೆಯ ಹಂಚುಗಳು, ಗೋಡೆಗಳು ಹಾಗೂ ಕಿಟಕಿ ಗಾಜುಗಳು ಪುಡಿಪುಡಿಯಾಗಿದ್ದು, ಘಟನೆಯಲ್ಲಿ ನಾಗೇಶ್ ಅವರ ಪತ್ನಿ ಕುಶಲ ಅವರು ತೀವ್ರ ಅಸ್ವಸ್ಥಗೊಂಡು ಆಸ್ಪತ್ರೆಗೆ ದಾಖಲಾಗಿದ್ದಾರೆ.

# ಕ್ರೀಡಾಪಟುಗಳಿಗೆ ಸರ್ಕಾರಿ ನೌಕರಿಯಲ್ಲಿ ಮೀಸಲಾತಿ

● ವಿಕ್ರಮ ವಾಹಿನಿ । ಬೆಂಗಳೂರು

ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಸರ್ಕಾರಿ ನೌಕರಿಯಲ್ಲಿ ಶೇ.2ರಷ್ಟು ಮೀಸಲಾತಿ ಕಲ್ಪಿಸಿ ಕರ್ನಾಟಕ ಸರ್ಕಾರ ಸೋಮವಾರ ಆದೇಶ ಹೊರಡಿಸಿದೆ. ಕರ್ನಾಟಕ ನಾಗರಿಕ ಸೇವೆಗಳ (ಸಾಮಾನ್ಯ ನೇಮಕಾತಿ) (ತಿದ್ದುಪಡಿ) ನಿಯಮಗಳು, 2026ರಡಿ ಈ ಮೀಸಲಾತಿ ಜಾರಿಗೆ ಬರಲಿದೆ.

ಸಿವಿಲ್ ಸೇವೆಗಳ ಎಲ್ಲ ನೇರ ನೇಮಕಾತಿಗಳಲ್ಲಿ ಸಾಮಾನ್ಯ ವರ್ಗ, ಎಸ್‌ಸಿ, ಎಸ್‌ಟಿ ಹಾಗೂ ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಲ್ಲೂ ಕ್ರೀಡಾಪಟುಗಳಿಗೆ ಶೇ.2ರಷ್ಟು ಮೀಸಲಾತಿ ಅನ್ವಯವಾಗಲಿದೆ. ಪೊಲೀಸ್ ಹಾಗೂ ಅರಣ್ಯ ಇಲಾಖೆಗಳ ನೇಮಕಾತಿಯಲ್ಲಿ ಶೇ.3ರಷ್ಟು ಮೀಸಲಾತಿ ನೀಡಲಾಗಿದೆ.

ರಾಜ್ಯದಲ್ಲಿ ಕನಿಷ್ಠ 10 ವರ್ಷ ವಾಸವಿದ್ದು, ರಾಷ್ಟ್ರೀಯ ಅಥವಾ ಅಂತಾರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸಿರುವ ಕ್ರೀಡಾಪಟುಗಳು ಇದರ ಪ್ರಯೋಜನ ಪಡೆಯಲಿದ್ದಾರೆ. ಒಲಿಂಪಿಕ್ಸ್, ಏಷ್ಯನ್ ಗೇಮ್ಸ್ ಸೇರಿದಂತೆ ಅಧಿಸೂಚಿತ 34 ಕ್ರೀಡೆಗಳ ಸಾಧನೆಗೆ ಅನುಗುಣವಾಗಿ ಕೃಪಾಂಕದ ಸೌಲಭ್ಯವೂ ದೊರೆಯಲಿದೆ.

ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗದಲ್ಲಿ ಹೆಚ್ಚಿನ ಅವಕಾಶ ಕಲ್ಪಿಸುವ ಈ ನಿರ್ಧಾರದಿಂದ ಕ್ರೀಡಾ ವಲಯದಲ್ಲಿ ಹರ್ಷ ವ್ಯಕ್ತವಾಗಿದೆ. ಕಳೆದ ನಾಲ್ಕು ವರ್ಷಗಳಿಂದ ಮೀಸಲಾತಿಗಾಗಿ ಕರ್ನಾಟಕ ಒಲಿಂಪಿಕ್ ಸಂಸ್ಥೆ ನಡೆಸಿದ ಪ್ರಯತ್ನಕ್ಕೆ ಇದೀಗ ಫಲ ಸಿಕ್ಕಂತಾಗಿದೆ.

# ತರ್ಪಣ ವಿಧಿ ಆಚರಣೆಗೆ ಶಾಸ್ತ್ರೀಯ ಅರಿವು ಅಗತ್ಯ: ವೀರೇಶಾನಂದ ಸರಸ್ವತಿ ಸ್ವಾಮೀಜಿ

● ವಿಕ್ರಮ ವಾಹಿನಿ । ಬೆಂಗಳೂರು

ಪಿತೃಕಾರ್ಯಗಳ ಪ್ರಮುಖ ಅಂಗವಾಗಿರುವ ತರ್ಪಣ ವಿಧಿಯನ್ನು ಕೇವಲ ಸಂಪ್ರದಾಯದ ಆಚರಣೆಯಾಗಿ ನೋಡದೆ, ಅದರ ಹಿಂದಿರುವ ಶಾಸ್ತ್ರೀಯ, ಧಾರ್ಮಿಕ ಹಾಗೂ ತಾತ್ವಿಕ ಆಶಯಗಳನ್ನು ಅರಿತು ಆಚರಿಸುವುದು ಅಗತ್ಯ ಎಂದು ರಾಮಕೃಷ್ಣ–ವಿವೇಕಾನಂದ ಆಶ್ರಮ, ತುಮಕೂರಿನ ಅಧ್ಯಕ್ಷರಾದ ಶ್ರೀ ವೀರೇಶಾನಂದ ಸರಸ್ವತಿ ಸ್ವಾಮೀಜಿ ಹೇಳಿದರು.



ಮಲ್ಲೇಶ್ವರಂನ ಶ್ರೀ ಶೃಂಗೇರಿ ಶಂಕರ ಮಠದಲ್ಲಿ ಶುಕ್ರವಾರ ನಡೆದ 'ತರ್ಪಣ ವಿಧಿ ವಿವೇಕ' ಗ್ರಂಥ ಲೋಕಾರ್ಪಣಾ ಸಮಾರಂಭದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಪಿತೃಗಳನ್ನು ಸ್ಮರಿಸುವುದು ಭಾರತೀಯ ಸಂಸ್ಕೃತಿಯ ವಿಶಿಷ್ಟ ಪರಂಪರೆ. ಪಿತೃಕಾರ್ಯಗಳ ಹಿಂದೆ ಕೃತಜ್ಞತೆ, ಸ್ಮರಣೆ ಹಾಗೂ ಕುಟುಂಬ ಪರಂಪರೆಯೊಂದಿಗಿನ ಸಂಬಂಧವನ್ನು ಗಟ್ಟಿಗೊಳಿಸುವ ಮೌಲ್ಯಗಳಿವೆ. ಇಂತಹ ಆಚರಣೆಗಳ ಉದ್ದೇಶ ಮತ್ತು ವಿಧಾನಗಳನ್ನು ಮುಂದಿನ ಪೀಳಿಗೆಗೆ ಸರಿಯಾದ ರೀತಿಯಲ್ಲಿ ತಿಳಿಸಿಕೊಡುವ ಅಗತ್ಯವಿದೆ. ಈ ನಿಟ್ಟಿನಲ್ಲಿ 'ತರ್ಪಣ ವಿಧಿ ವಿವೇಕ'ಕೃತಿ ಉಪಯುಕ್ತವಾಗಿದೆ ಎಂದು ಅವರು ಹೇಳಿದರು. ಲೋಕೋಪಯೋಗೀ ಕಾರ್ಯಗಳು ಮಕ್ಕಳು ಮಾಡಬೇಕಾದರೇ ಅದರಲ್ಲಿ ತಾಯಿಯ ಮಹತ್ವ ಬಹಳ ಇದೆ ಎಂದು ಈ ಸಂದರ್ಭದಲ್ಲಿ ಹೇಳಿದರು. ಪಿತೃಗಳನ್ನ ನೆನೆಯುವ ವಿಷಯದಲ್ಲಿ ಒಂದು ಆತ್ಮಾವಲೋಕನ ಮಾಡಿಕೊಳ್ಳುವಂತಹದು ಆಗಬೇಕು ಈ ದಿನದ ಕಾರ್ಯಕ್ರಮ ಎಂದು ಹೇಳಿದರು.

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಕುಲಪತಿ ಡಾ. ಎಸ್. ಅಹಲ್ಯಾ ಶರ್ಮ ಮುಖ್ಯ ಅತಿಥಿಗಳಾಗಿ ಮಾತನಾಡಿ, ಶಾಸ್ತ್ರ–ಪರಂಪರೆಯ ವಿಚಾರಗಳನ್ನು ಸಾಮಾನ್ಯ ಓದುಗರಿಗೆ ಸುಲಭವಾಗಿ ಅರ್ಥವಾಗುವ ರೀತಿಯಲ್ಲಿ ದಾಖಲಿಸುವುದು ಇಂದಿನ ಅಗತ್ಯವಾಗಿದೆ. ತರ್ಪಣ ವಿಧಿಯಂತಹ ಆಚರಣೆಗಳ ಕುರಿತು ಇರುವ ಸಂದೇಹಗಳಿಗೆ ಶಾಸ್ತ್ರೀಯ ಆಧಾರದಲ್ಲಿ ಸ್ಪಷ್ಟತೆ ನೀಡುವ ಕೃತಿಗಳು ಹೆಚ್ಚು ಬರಬೇಕು ಎಂದರು.

ಫೈ ದುಬೈ ನ ಘಟನೆಯನ್ನು ಈ ಸಂದರ್ಭದಲ್ಲಿ ನೆನೆಸಿದರು. ಪಿತೃಗಳ ಬಗ್ಗೆ ಉಪಕಾರ ಸ್ಮರಣೆಯನ್ನ ಎಲ್ಲರಲ್ಲೂ ಇರಬೇಕು ಎಂದರು. ಹಾಗೂ ಆಯುರ್ವೇದದ ರೀತ್ಯಾ ಮನುಷ್ಯನ ಹುಟ್ಟಿನ ಬಗ್ಗೆ ಚರಕಸಂಹಿತೆಯನ್ನು ಉಲ್ಲೇಖಿಸಿದರು.

ಶಿಕ್ಷಣ ಇಲಾಖೆಯ ನಿವೃತ್ತ ಹಿರಿಯ ಅಧಿಕಾರಿ ವೇ.ಬ್ರ. ಶ್ರೀ ವೆಂಕಟರಾಮ ಶಾಸ್ತ್ರಿಗಳು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ವೇದಾಂತ ವಿಭಾಗದ ಮುಖ್ಯಸ್ಥರಾದ ಡಾ. ವಿನಯಾಚಾರ್ಯ ಪಿ. ಹಾಗೂ ಜ್ಯೋತಿಷಿ ವೇ.ಬ್ರ. ಶ್ರೀ ತುಮಕೂರು ಕರಣೀಕ ನರಹರಿ ಶರ್ಮ ಉಪಸ್ಥಿತರಿದ್ದರು.

ಅನಂತರಾಮ ಪ್ರಕಾಶನ ವತಿಯಿಂದ ಪ್ರಕಟವಾಗಿರುವ 'ತರ್ಪಣ ವಿಧಿ ವಿವೇಕ' ಕೃತಿಯು ತರ್ಪಣ ವಿಧಿಯ ಉದ್ದೇಶ, ಪಿತೃಕಾರ್ಯದ ಮಹತ್ವ, ಅದರ ಧಾರ್ಮಿಕ–ತಾತ್ವಿಕ ಹಿನ್ನೆಲೆ ಹಾಗೂ ಶಾಸ್ತ್ರೋಕ್ತ ಆಚರಣಾ ಕ್ರಮಗಳನ್ನು ಪರಿಚಯಿಸುತ್ತದೆ.

ಗ್ರಂಥಕರ್ತ ಡಾ. ಅಜಿತ್ ನಿರಂಜನ್ ವೈ.ಎ. ಮಾತನಾಡಿ, ಪಿತೃಕಾರ್ಯಗಳಿಗೆ ಸಂಬಂಧಿಸಿದ ಶಾಸ್ತ್ರೀಯ ವಿಚಾರಗಳು ಸಾಮಾನ್ಯರಿಗೂ ಸುಲಭವಾಗಿ ಅರ್ಥವಾಗಬೇಕು ಎಂಬ ಉದ್ದೇಶದಿಂದ ಕೃತಿಯನ್ನು ರೂಪಿಸಲಾಗಿದೆ. ತರ್ಪಣ ವಿಧಿಯ ಕುರಿತು ಜನರಲ್ಲಿ ಇರುವ ಗೊಂದಲ ಹಾಗೂ ಸಂದೇಹಗಳಿಗೆ ಶಾಸ್ತ್ರಾಧಾರಿತವಾಗಿ ಉತ್ತರ ನೀಡುವ ಪ್ರಯತ್ನವನ್ನು ಕೃತಿಯಲ್ಲಿ ಮಾಡಲಾಗಿದೆ ಎಂದರು.

ಕಾರ್ಯಕ್ರಮಕ್ಕೆ ಎಸ್.ಎಲ್.ಎನ್. ಟ್ರಸ್ಟ್, ರಾಜಾಜಿನಗರ, ಬೆಂಗಳೂರು ಸಹಕಾರ ನೀಡಿತ್ತು. ಗಣ್ಯರು, ವಿದ್ವಾಂಸರು, ಆಧ್ಯಾತ್ಮಿಕಾಸಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# 'ರಾಹುಲ್ ಗಾಂಧಿ ಈಗ ಕಾಕ್ರೋಚ್ ಜನತಾ ಪಾರ್ಟಿಯ ಹಿಂದೆ ಹೋಗಿದ್ದಾರೆ'

**ಎಸ್‌ಐಆರ್ ವಿರೋಧಿ ಹೋರಾಟಕ್ಕೆ ಸಂಬಂಧಿಸಿ ಬಿಜೆಪಿ–ಜೆಡಿಎಸ್ ಕಾರ್ಯಕರ್ತರ ವಿರುದ್ಧ ಪೊಲೀಸರು ಕೈಗೊಳ್ಳುತ್ತಿರುವ ಕ್ರಮವನ್ನು ಖಂಡಿಸಿರುವ ಪ್ರತಿಪಕ್ಷ ನಾಯಕ ಆರ್.ಅಶೋಕ, ಈ ಬಗ್ಗೆ ರಾಜ್ಯಪಾಲರಿಗೆ ದೂರು ನೀಡುವುದಾಗಿ ತಿಳಿಸಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಪೊಲೀಸರ ಕ್ರಮದ ವಿರುದ್ಧವೂ ಚುನಾವಣಾ ಅಧಿಕಾರಿಗಳಿಂದ ಮಾಹಿತಿ ಪಡೆದು ಕಾನೂನುಬದ್ಧವಾಗಿ ಪ್ರಶ್ನಿಸುವುದಾಗಿ ಹೇಳಿದ್ದಾರೆ.**

● ವಿಕ್ರಮ ವಾಹಿನಿ । ಬೆಂಗಳೂರು

ಎಸ್‌ಐಆರ್ ವಿಚಾರದಲ್ಲಿ ಬಿಜೆಪಿ–ಜೆಡಿಎಸ್ ಕಾರ್ಯಕರ್ತರ ವಿರುದ್ಧ ಕ್ರಮ ಕೈಗೊಳ್ಳುತ್ತಿರುವ ಪೊಲೀಸರ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಲಾಗುವುದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.



ವಿಧಾನಪರಿಷತ್ ಚುನಾವಣೆಯ ಎನ್‌ಡಿಎ ಅಭ್ಯರ್ಥಿಗಳ ನಾಮಪತ್ರ ಸಲ್ಲಿಕೆ ಕಾರ್ಯದಲ್ಲಿ ಪಾಲ್ಗೊಂಡ ಬಳಿಕ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ವಿಧಾನಪರಿಷತ್ ಚುನಾವಣೆಯ ಎನ್‌ಡಿಎ ಅಭ್ಯರ್ಥಿಗಳಾದ ಎ.ಪಿ.ರಂಗನಾಥ್ ಹಾಗೂ ಸುರೇಶ್ ಅವರ ನಾಮಪತ್ರ ಸಲ್ಲಿಕೆ ಕಾರ್ಯದಲ್ಲಿ ಪಾಲ್ಗೊಂಡಿದ್ದು, ಅವರಿಗೆ ಶುಭ ಕೋರಲಾಗಿದೆ. ಎನ್‌ಡಿಎ ಅಭ್ಯರ್ಥಿಗಳು ಸಂಪೂರ್ಣ ಬೆಂಬಲದೊಂದಿಗೆ ಗೆಲ್ಲಲಿದ್ದಾರೆ ಎಂದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಾನೂನು ಕೈಗೆತ್ತಿಕೊಂಡು ಎಸ್‌ಐಆರ್ ವಿರುದ್ಧ ಚುನಾವಣಾ ಆಯೋಗದ ಕಚೇರಿ ಮುಂದೆ ಪ್ರತಿಭಟಿಸಿದ್ದರು. ಫುಟ್‌ಪಾತ್‌ನಲ್ಲಿ ಕಾಯುತ್ತಿದ್ದೆ ಎಂದರೆ ಯಾರೂ ನಂಬುವುದಿಲ್ಲ. ಇಂತಹ ಮುಖ್ಯಮಂತ್ರಿಯನ್ನು ಪಡೆದ ಕಾಂಗ್ರೆಸ್‌ನವರೇ ಪುಣ್ಯವಂತರು. ಎಸ್‌ಐಆರ್ ವಿಚಾರದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರನ್ನು ಬಂಧಿಸುತ್ತಿರುವುದರ ವಿರುದ್ಧ ರಾಜ್ಯಪಾಲರಿಗೆ ದೂರು ನೀಡುತ್ತೇವೆ. ಚುನಾವಣಾಧಿಕಾರಿಗಳಿಂದ ಮಾಹಿತಿ ಪಡೆದು ಮುಖ್ಯಮಂತ್ರಿ, ಸಚಿವರ ವಿರುದ್ಧ ದೂರು ದಾಖಲಿಸುತ್ತೇವೆ ಎಂದು ಪೊಲೀಸ್ ಮಹಾನಿರ್ದೇಶಕರು ಹೇಳಿದ್ದರು. ಅದನ್ನು ಕೂಡ ಪ್ರಶ್ನೆ ಮಾಡುತ್ತೇವೆ ಎಂದರು.

ಬಿ.ಎಲ್.ಸಂತೋಷ್ ಅವರು ಚುನಾವಣಾ ರಾಜಕೀಯಕ್ಕೆ ಬಂದಿಲ್ಲ. ಸಂಘ ಹಾಗೂ ಪಕ್ಷವನ್ನು ಕಟ್ಟುವುದರಲ್ಲಿ ಅವರು ನಿರತರಾಗಿದ್ದಾರೆ. ಕಳಂಕರಹಿತವಾದ ವ್ಯಕ್ತಿತ್ವದ ಅವರನ್ನು ಈ ವಿಚಾರಕ್ಕೆ ಎಳೆಯಬಾರದು. ಬಿ.ಕೆ.ಹರಿಪ್ರಸಾದ್ ಅವರು ಯಾವುದೇ ಚುನಾವಣೆ ಗೆಲ್ಲದೆ ಕೆಪಿಸಿಸಿ ಅಧ್ಯಕ್ಷರಾಗಿದ್ದಾರೆ. ಹಿಂಬರಹ ಪಡೆದು ಬೆದರಿಕೆ ಹಾಕುವುದು ನಡೆಯುವುದಿಲ್ಲ. ಶಾಸಕರಾದ ಮುನಿರತ್ನ, ಬೈರತಿ ಬಸವರಾಜು, ಸಿ.ಟಿ.ರವಿ ಅವರ ವಿರುದ್ಧ ಪ್ರಕರಣ ದಾಖಲಿಸಿದ್ದು, ಈ ಕೆಲಸ ಮಾಡಿರುವವರಿಗೆ ರಿವರ್ಸ್ ಆಗಲಿದೆ ಎಂದು ಎಚ್ಚರಿಕೆ ನೀಡಿದರು.

ಮುಖ್ಯ ಚುನಾವಣಾಧಿಕಾರಿ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸುವುದನ್ನು ಸುಪ್ರೀಂ ಕೋರ್ಟ್ ಮಾನ್ಯ ಮಾಡದೆ ಕಾಂಗ್ರೆಸ್‌ಗೆ ಕಪಾಳಮೋಕ್ಷವಾಗಿದೆ. ರಾಹುಲ್ ಗಾಂಧಿ ಈಗ ಕಾಕ್ರೋಚ್ ಜನತಾ ಪಾರ್ಟಿಯ ಹಿಂದೆ ಹೋಗಿದ್ದಾರೆ. ಇಂತಹ ಪರಿಸ್ಥಿತಿ ಬಂದಿರುವುದಕ್ಕೆ ನಾಚಿಕೆಯಾಗಬೇಕು ಎಂದರು.

# ನಸೀರುದ್ದೀನ್ ಶಾ ವಿರುದ್ಧ ಪಿಯೂಷ್ ಮಿಶ್ರಾ ಕಿಡಿ

● ವಿಕ್ರಮ ವಾಹಿನಿ । ಮುಂಬೈ

ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಮುಂಬೈನಲ್ಲಿ ನಡೆದ 'ಕಾಕ್ರೋಚ್ ಜನತಾ ಪಾರ್ಟಿ' (ಅಎಕ) ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಹಿರಿಯ ನಟ ನಸೀರುದ್ದೀನ್ ಶಾ ವಿರುದ್ಧ ನಟ ಹಾಗೂ ಲೇಖಕ ಪಿಯೂಷ್ ಮಿಶ್ರಾ ವಾಗ್ದಾಳಿ ನಡೆಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ವಿಡಿಯೊ ಹಂಚಿಕೊಂಡಿರುವ ಮಿಶ್ರಾ, ಇತ್ತೀಚೆಗೆ ಫ್ಲೈದುಬೈ ವಿಮಾನದಲ್ಲಿ ಸಂಭವಿಸಿದ ತುರ್ತು ಪರಿಸ್ಥಿತಿಯ ವೇಳೆ 180 ಪ್ರಯಾಣಿಕರ ಜೀವ ಉಳಿಸಿದ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರ ಧೈರ್ಯದ ಬಗ್ಗೆಯೂ ಶಾ ಮಾತನಾಡಬೇಕು ಎಂದು ವ್ಯಂಗ್ಯವಾಗಿ ಹೇಳಿದ್ದಾರೆ.

ಇತ್ತೀಚೆಗೆ ಲವ್ಲಿ ಪ್ರೊಫೆಷನಲ್ ಯೂನಿವರ್ಸಿಟಿಯಲ್ಲಿ ನಡೆದ ವಿದ್ಯಾರ್ಥಿ ಪ್ರತಿಭಟನೆ ವೇಳೆ ಪೊಲೀಸರ ಕ್ರಮದ ಕುರಿತು ಶಾ ಪ್ರತಿಕ್ರಿಯಿಸದಿರುವುದನ್ನೂ ಮಿಶ್ರಾ ಪ್ರಶ್ನಿಸಿದ್ದಾರೆ. ವಿದ್ಯಾರ್ಥಿ ಚಳವಳಿಗಳ ಕುರಿತು ಈ ಹಿಂದೆ ಶಾ ನೀಡಿದ್ದ ಹೇಳಿಕೆಗಳನ್ನು ಉಲ್ಲೇಖಿಸಿ, ಇದೀಗ ವಿದ್ಯಾರ್ಥಿಗಳ ಪರವಾಗಿ ಧ್ವನಿ ಎತ್ತದಿರುವುದಕ್ಕೆ ಕಾರಣವೇನು ಎಂದು ಪ್ರಶ್ನಿಸಿದ್ದಾರೆ. ತಮ್ಮ ದೀರ್ಘಕಾಲದ ಸಹೋದ್ಯೋಗಿಯಾಗಿರುವ ನಸೀರುದ್ದೀನ್ ಶಾ ಅವರು ರಾಷ್ಟ್ರೀಯ ಮಹತ್ವದ ಇತರ ವಿಷಯಗಳ ಬಗ್ಗೆಯೂ ಧ್ವನಿ ಎತ್ತಬೇಕು ಎಂದು ಮಿಶ್ರಾ ಒತ್ತಾಯಿಸಿದ್ದಾರೆ.

# ಮೋದಿ ಔತಣಕೂಟದಲ್ಲಿ ಡಾ. ಆನಂದ ಸಂಕೇಶ್ವರ ಭಾಗಿ

● ವಿಕ್ರಮ ವಾಹಿನಿ । ನವದೆಹಲಿ

ಮೂರು ದಿನಗಳ ಭಾರತ ಪ್ರವಾಸಕ್ಕಾಗಿ ಸೋಮವಾರ ನವದೆಹಲಿಗೆ ಆಗಮಿಸಿದ ಸ್ವಿಜರ್ಲೆಂಡ್ ಅಧ್ಯಕ್ಷ ಗೈ ಪರ್ಮೆಲಿನ್ ಅವರಿಗೆ ಭವ್ಯ ಸ್ವಾಗತ ನೀಡಲಾಯಿತು. ಬಳಿಕ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದ ಪರ್ಮೆಲಿನ್, ವ್ಯಾಪಾರ, ಹೂಡಿಕೆ, ಕೃತಕ ಬುದ್ಧಿಮತ್ತೆ, ರಕ್ಷಣಾ ಉತ್ಪಾದನೆ, ವಿಜ್ಞಾನ ಮತ್ತು ತಂತ್ರಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳ ಸಹಕಾರ ವಿಸ್ತರಣೆ ಕುರಿತು ಚರ್ಚಿಸಿದರು.



ಸ್ವಿಸ್ ಅಧ್ಯಕ್ಷರ ಗೌರವಾರ್ಥ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯ ಹೈದರಾಬಾದ್ ಹೌಸ್‌ನಲ್ಲಿ ಸೋಮವಾರ ಆಯ್ದ ಗಣ್ಯರಿಗೆ ಏರ್ಪಡಿಸಿದ್ದ ಔತಣಕೂಟದಲ್ಲಿ ವಿಆರ್‌ಎಲ್ ಸಮೂಹ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕ ಡಾ. ಆನಂದ ಸಂಕೇಶ್ವರ ಅವರು ಆಹ್ವಾನಿತರಾಗಿ ಭಾಗವಹಿಸಿದ್ದರು.

ಭಾರತದ 13 ಗಣ್ಯರು ಹಾಗೂ ಸ್ವಿಸ್ ನಿಯೋಗದ ಸದಸ್ಯರು ಸೇರಿದಂತೆ ಒಟ್ಟು 40 ಪ್ರಮುಖರು ಔತಣಕೂಟದಲ್ಲಿ ಪಾಲ್ಗೊಂಡಿದ್ದರು. ಭಾರತ–ಸ್ವಿಜರ್ಲೆಂಡ್ ನಡುವಿನ ಆರ್ಥಿಕ ಸಹಕಾರ, ಹೂಡಿಕೆ ಹಾಗೂ ವಿವಿಧ ಕ್ಷೇತ್ರಗಳ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸುವ ಕುರಿತು ಈ ಭೇಟಿಯಲ್ಲಿ ಚರ್ಚೆ ನಡೆಯಿತು.

# ತಿರುಪತಿ ತಿಮ್ಮಪ್ಪನ ದರ್ಶನ ಪಡೆದ ಶಿಖರ್ ಧವನ್; ದೇಗುಲದ ವ್ಯವಸ್ಥೆಗೆ ಮೆಚ್ಚುಗೆ



● ವಿಕ್ರಮ ವಾಹಿನಿ । ತಿರುಪತಿ

ಭಾರತದ ಮಾಜಿ ಕ್ರಿಕೆಟಿಗ ಶಿಖರ್ ಧವನ್ ಅವರು ಪತ್ನಿ ಸೋಫಿ ಶೈನ್ ಅವರೊಂದಿಗೆ ತಿರುಮಲಕ್ಕೆ ಭೇಟಿ ನೀಡಿ ಶ್ರೀ ವೆಂಕಟೇಶ್ವರ ಸ್ವಾಮಿಯ ದರ್ಶನ ಪಡೆದರು. ವಿಶೇಷ ಪೂಜೆ ಸಲ್ಲಿಸಿದ ಬಳಿಕ ದೇವಾಲಯದ ವ್ಯವಸ್ಥೆ ಹಾಗೂ ದರ್ಶನದ ಅನುಭವವನ್ನು ಮೆಚ್ಚಿಕೊಂಡರು.

"ತುಂಬಾ ಅದ್ಭುತವಾದ ದರ್ಶನವಾಯಿತು. ಇಲ್ಲಿನ ಆಡಳಿತ ಮಂಡಳಿ ಉತ್ತಮ ವ್ಯವಸ್ಥೆ ಮಾಡಿದೆ. ಶ್ರೀ ತಿರುಪತಿ ದೇವರ ದರ್ಶನ ಪಡೆದಿರುವುದಕ್ಕೆ ಕೃತಜ್ಞನಾಗಿದ್ದೇನೆ" ಎಂದು ಧವನ್ ಸಂತಸ ವ್ಯಕ್ತಪಡಿಸಿದರು. ಧವನ್ ಅವರು ತಿರುಮಲಕ್ಕೆ ಆಗಮಿಸಿರುವ ಸುದ್ದಿ ತಿಳಿದು ಅಭಿಮಾನಿಗಳು ಅವರನ್ನು ನೋಡಲು ಮುಗಿಬಿದ್ದರು. ದರ್ಶನದ ಬಳಿಕ ಧವನ್ ಅವರ ಭೇಟಿಯ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿವೆ.

ಆಧ್ಯಾತ್ಮಿಕ ವಿಚಾರಗಳಲ್ಲಿ ಆಸಕ್ತಿ ಹೊಂದಿರುವ ಧವನ್, ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ ಬಳಿಕ ಹಲವು ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುತ್ತಿದ್ದಾರೆ. 2024ರ ಸೆಪ್ಟೆಂಬರ್‌ನಲ್ಲಿ ಅಂತಾರಾಷ್ಟ್ರೀಯ ಹಾಗೂ ದೇಶೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದ ಅವರು, ಭಾರತ ಪರ ಮೂರು ಮಾದರಿಯ ಕ್ರಿಕೆಟ್‌ನಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ.

# ಪರಿಷತ್ ಚುನಾವಣೆಯಲ್ಲಿ ಕೆಪಿಎಸ್‌ಸಿ ಹಗರಣದ ಪರಿಣಾಮ: ಹೆಚ್‌ಡಿಕೆ

● ವಿಕ್ರಮ ವಾಹಿನಿ । ಬೆಂಗಳೂರು

ಕೆಪಿಎಸ್‌ಸಿ ನೇಮಕಾತಿ ಹಗರಣಗಳು ಹಾಗೂ ಸರ್ಕಾರದ ವಿರುದ್ಧದ ವಿವಿಧ ಆರೋಪಗಳಿಂದ ಶಿಕ್ಷಕರು, ಪದವೀಧರರು ಹಾಗೂ ಯುವಜನರು ಅಸಮಾಧಾನಗೊಂಡಿದ್ದು, ಪ್ರಸಕ್ತ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಬೆಂಗಳೂರು ಶಿಕ್ಷಕರ ಕ್ಷೇತ್ರ ಹಾಗೂ ಆಗ್ನೇಯ ಪದವೀಧರ ಕ್ಷೇತ್ರದ ಎನ್‌ಡಿಎ ಅಭ್ಯರ್ಥಿಗಳಾದ ಎ.ಪಿ.ರಂಗನಾಥ್ ಮತ್ತು ಕೆ.ಎಂ.ಸುರೇಶ್ ನಾಮಪತ್ರ ಸಲ್ಲಿಕೆ ಸಂದರ್ಭದಲ್ಲಿ ಮಾತನಾಡಿದ ಅವರು, ಪರಿಷತ್‌ನ ನಾಲ್ಕೂ ಕ್ಷೇತ್ರಗಳಲ್ಲಿ ಎನ್‌ಡಿಎ ಅಭ್ಯರ್ಥಿಗಳು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕೆಪಿಎಸ್‌ಸಿ ನೇಮಕಾತಿ ಮಾತ್ರವಲ್ಲದೆ, ರಾಜ್ಯದಲ್ಲಿ ಹಲವು ಹಗರಣಗಳು ನಡೆದಿವೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಯುವಜನರು ಸರ್ಕಾರದ ವಿರುದ್ಧ ಅಸಮಾಧಾನಗೊಂಡಿದ್ದಾರೆ. ಇದರ ಪರಿಣಾಮ ಚುನಾವಣೆಯಲ್ಲೂ ವ್ಯಕ್ತವಾಗಬಹುದು ಎಂದರು. ಆದರೆ, ಈ ಚುನಾವಣೆ ಯಾವುದೇ ದಿಕ್ಸೂಚಿ ಚುನಾವಣೆ ಅಲ್ಲ ಎಂದು ಸ್ಪಷ್ಟಪಡಿಸಿದರು.

**ನೈಸ್ ವಿವಾದ:** ನೈಸ್ ವಿಚಾರದಲ್ಲಿ ಹೈಕೋರ್ಟ್ ನೀಡಿರುವ ಆದೇಶಕ್ಕೆ ಸುಪ್ರೀಂ ಕೋರ್ಟ್‌ನಲ್ಲಿ ತಡೆಯಾಜ್ಞೆ ಪಡೆಯಲು ಪ್ರಯತ್ನಿಸಲಾಗುತ್ತಿದೆ. ನ.2ರಂದು ವಿಚಾರಣೆ ನಿಗದಿಯಾಗಿದ್ದು, ತಡೆಯಾಜ್ಞೆ ನೀಡುವಂತೆ ಮನವಿ ಮಾಡಲಾಗಿದೆ. ರೈತರ ಹೋರಾಟಕ್ಕೆ ನ್ಯಾಯಯುತ ಬೆಲೆ ಸಿಕ್ಕಿದೆ ಎಂದು ಹೇಳಿದರು.

ನೈಸ್ ವಿವಾದದಿಂದ ಗಮನ ಬೇರೆಡೆ ಸೆಳೆಯಲು ಬಿಜೆಪಿ–ಜೆಡಿಎಸ್ ವಿರುದ್ಧ ಆರೋಪ ಮಾಡಲಾಗುತ್ತಿದೆ. ಸರ್ಕಾರದ 'ಪಾಪದ ಕೊಡ' ತುಂಬಿದೆ ಎಂದು ಕುಮಾರಸ್ವಾಮಿ ಟೀಕಿಸಿದರು.

# ಅಪರಾಧಿಗಳಲ್ಲಿ ಕಾನೂನಿನ ಭಯ ಮೂಡಿಸಿ: ಸುಪ್ರೀಂ

● ವಿಕ್ರಮ ವಾಹಿನಿ । ನವದೆಹಲಿ

ಮಹಿಳೆಯರ ವಿರುದ್ಧ ಅಪರಾಧ ಎಸಗುವವರಲ್ಲಿ ಕಾನೂನಿನ ಭಯ ಮೂಡಿಸುವ ಮೂಲಕ ಇಂತಹ ಕೃತ್ಯಗಳನ್ನು ತಡೆಯಬೇಕು ಎಂದು ಸುಪ್ರೀಂ ಕೋರ್ಟ್ ಸೋಮವಾರ ಹೇಳಿದೆ. ಅಪರಾಧ ನಡೆದ ಬಳಿಕ ಕ್ರಮ ಕೈಗೊಳ್ಳುವುದಕ್ಕಿಂತ, ಅದು ನಡೆಯದಂತೆ ತಡೆಯುವುದು ಮುಖ್ಯ ಎಂದು ನ್ಯಾಯಾಲಯ ಒತ್ತಿಹೇಳಿತು.

ದೆಹಲಿ–ಎನ್‌ಸಿಆರ್‌ನಲ್ಲಿ ಇತ್ತೀಚೆಗೆ ನಡೆದ ಅತ್ಯಾಚಾರ ಪ್ರಕರಣಗಳ ಕುರಿತು ಸ್ವಯಂಪ್ರೇರಿತವಾಗಿ ದಾಖಲಿಸಿಕೊಂಡಿರುವ ಪ್ರಕರಣದ ವಿಚಾರಣೆ ವೇಳೆ ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಹಾಗೂ ಕೆ. ವಿನೋದ್ ಚಂದ್ರನ್ ಅವರ ಪೀಠ ಈ ಅಭಿಪ್ರಾಯ ವ್ಯಕ್ತಪಡಿಸಿತು.

ಮಹಿಳೆಯರು ರಾತ್ರಿ 11 ಗಂಟೆಯಾದರೂ ರಸ್ತೆ ಹಾಗೂ ಮೆಟ್ರೋದಲ್ಲಿ ನಿರ್ಭಯವಾಗಿ ಸಂಚರಿಸುವಂತಹ ಸುರಕ್ಷಿತ ವಾತಾವರಣ ನಿರ್ಮಿಸಬೇಕು.

ಗೂಂಡಾಗಳು ಹಾಗೂ ಸಮಾಜವಿರೋಧಿ ಶಕ್ತಿಗಳಲ್ಲಿ ಪೊಲೀಸರು ಕಾನೂನಿನ ಭಯ ಮೂಡಿಸಬೇಕು ಎಂದು ಪೀಠ ಸೂಚಿಸಿತು.

ದೆಹಲಿ–ಎನ್‌ಸಿಆರ್‌ನ ಅತ್ಯಾಚಾರ ಪ್ರಕರಣಗಳ ಮಾಧ್ಯಮ ವರದಿಗಳ ಆಧಾರದ ಮೇಲೆ ಸೆ.28ರಂದು ಸುಪ್ರೀಂ ಕೋರ್ಟ್ ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿಕೊಂಡಿತ್ತು.

ಆಸ್ಥಾ ಕುಂಜ್ ಪಾರ್ಕ್, ಸ್ವರೂಪ್ ನಗರ ಹಾಗೂ ಚಲಿಸುತ್ತಿದ್ದ ಸ್ಲೀಪರ್ ಬಸ್‌ನಲ್ಲಿ ನಡೆದಿರುವುದಾಗಿ ಆರೋಪಿಸಲಾದ ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ನ್ಯಾಯಾಲಯ ಪರಿಗಣಿಸಿದೆ.

ಮಹಿಳೆಯರ ಸುರಕ್ಷತೆಗಾಗಿ ಪೊಲೀಸ್ ಗಸ್ತು ಹಾಗೂ ತಡೆಗಟ್ಟುವ ಕ್ರಮಗಳನ್ನು ಮತ್ತಷ್ಟು ಬಲಪಡಿಸುವ ಅಗತ್ಯವಿದೆ ಎಂದು ಪೀಠ ತಿಳಿಸಿತು.

# ಏಷ್ಯನ್ ಗೇಮ್ಸ್ ಪದಕ ವಿಜೇತೆ ಪೂವಮ್ಮಗೆ ಕುಮಾರಸ್ವಾಮಿ ಸನ್ಮಾನ

● ವಿಕ್ರಮ ವಾಹಿನಿ । ಬೆಂಗಳೂರು

ಏಷ್ಯನ್ ಗೇಮ್ಸ್ ರಿಲೆಯಲ್ಲಿ ಚಿನ್ನದ ಪದಕ ಗೆದ್ದು ದೇಶ ಹಾಗೂ ರಾಜ್ಯಕ್ಕೆ ಕೀರ್ತಿ ತಂದಿರುವ ಕ್ರೀಡಾಪಟು ಎಂ.ಆರ್. ಪೂವಮ್ಮ ಅವರನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸೋಮವಾರ ಹೆಚ್‌ಎಂಟಿ ಭವನದಲ್ಲಿರುವ ತಮ್ಮ ಕಚೇರಿಯಲ್ಲಿ ಸನ್ಮಾನಿಸಿದರು.

ಸಚಿವರ ಆಹ್ವಾನದ ಮೇರೆಗೆ ಮಂಗಳೂರಿನಿಂದ ಬೆಂಗಳೂರಿಗೆ ಆಗಮಿಸಿದ ಪೂವಮ್ಮ ಅವರು ಪತಿ, ತಂದೆ–ತಾಯಿ ಹಾಗೂ ಕುಟುಂಬದ ಸದಸ್ಯರೊಂದಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಈ ವೇಳೆ ಕುಮಾರಸ್ವಾಮಿ ಅವರು ಪೂವಮ್ಮ ಅವರ ಸಾಧನೆ ಹಾಗೂ ಕ್ರೀಡಾ ಪಯಣದ ಕುರಿತು ಮಾಹಿತಿ ಪಡೆದು, ಕುಟುಂಬದ ಸದಸ್ಯರೊಂದಿಗೆ ಕೆಲಕಾಲ ಚರ್ಚಿಸಿದರು.



**ಏಷ್ಯನ್ ಗೇಮ್ಸ್ ನಲ್ಲಿ ಪದಕ ವಿಜೇತೆಯಾದ ಶ್ರೀಮತಿ ಪೂವಮ್ಮ ಅವರನ್ನು ಮಾನ್ಯ ಕೇಂದ್ರ ಸಚಿವರಾದ ಶ್ರೀ ಎಚ್ ಡಿ ಕುಮಾರಸ್ವಾಮಿ ಅವರು ಬೆಂಗಳೂರಿನ ಹೆಚ್ ಎಮ್ ಟಿ ಭವನದಲ್ಲಿ ಗೌರವಿಸಿದರು. ಈ ಸಂದರ್ಭದಲ್ಲಿ ಪೂವಮ್ಮ ಅವರ ಪೋಷಕರು ಮತ್ತು ಅವರ ಇಡೀ ಪರಿವಾರ ಹಾಜರಿದ್ದರು. ಎಲ್ಲರನ್ನೂ ಕೇಂದ್ರ ಸಚಿವರು ಅತ್ಯಂತ ಆತ್ಮೀಯವಾಗಿ ಸತ್ಕರಿಸಿ ಗೌರವಿಸಿದರು.**

ಪೂವಮ್ಮ ಅವರ ಸಾಧನೆಯನ್ನು ಶ್ಲಾಘಿಸಿದ ಸಚಿವರು, "ನಿಮ್ಮ ಪರಿಶ್ರಮ ಮತ್ತು ಸಾಧನೆ ಹೊಸ ತಲೆಮಾರಿನ ಯುವಜನರಿಗೆ ಪ್ರೇರಣೆಯಾಗಲಿ. ರಾಜ್ಯ ಹಾಗೂ ದೇಶದ ಕ್ರೀಡಾ ಕ್ಷೇತ್ರಕ್ಕೆ ಇನ್ನಷ್ಟು ಕೊಡುಗೆ ನೀಡುವಂತಾಗಲಿ" ಎಂದು ಹಾರೈಸಿದರು. ಕೇಂದ್ರ ಸರ್ಕಾರ ಹಾಗೂ ವೈಯಕ್ತಿಕವಾಗಿ ಕ್ರೀಡಾ ಪ್ರತಿಭೆಗಳಿಗೆ ಅಗತ್ಯ ಪ್ರೋತ್ಸಾಹ ನೀಡುವುದಾಗಿ ಭರವಸೆ ನೀಡಿದರು. ಕೇಂದ್ರ ಸರ್ಕಾರ ಕ್ರೀಡೆಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ದೇಶೀಯ ಪ್ರತಿಭೆಗಳು ರಾಷ್ಟ್ರೀಯ ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೆಳಗಲು ಅಗತ್ಯ ಮೂಲಸೌಕರ್ಯ ಮತ್ತು ಪ್ರೋತ್ಸಾಹ ಒದಗಿಸಲಾಗುತ್ತಿದೆ ಎಂದು ಕುಮಾರಸ್ವಾಮಿ ಹೇಳಿದರು.

ಸನ್ಮಾನ ಸ್ವೀಕರಿಸಿದ ಪೂವಮ್ಮ, ಪದಕ ಗೆದ್ದ ತಕ್ಷಣವೇ ಮೊದಲಿಗೆ ಅಭಿನಂದಿಸಿದವರಲ್ಲಿ ಕುಮಾರಸ್ವಾಮಿ ಅವರೂ ಒಬ್ಬರು. ಅವರಿಂದ ದೊರೆತ ಪ್ರೋತ್ಸಾಹಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ. ಕೇಂದ್ರ ಸಚಿವರೇ ಖುದ್ದಾಗಿ ಬರಮಾಡಿಕೊಂಡು ಗೌರವಿಸಿರುವುದು ಜೀವನದ ಅವಿಸ್ಮರಣೀಯ ಕ್ಷಣ ಎಂದು ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕುಮಾರಸ್ವಾಮಿ ಅವರು ಪೂವಮ್ಮ ಅವರ ತಂದೆ–ತಾಯಿಯ ಆರೋಗ್ಯ ವಿಚಾರಿಸಿ, ಕುಟುಂಬದ ಎಲ್ಲ ಸದಸ್ಯರಿಗೂ ಹೆಚ್‌ಎಂಟಿ ಕೈಗಡಿಯಾರಗಳನ್ನು ಉಡುಗೊರೆಯಾಗಿ ನೀಡಿದರು. ನವದೆಹಲಿಯ ತಮ್ಮ ನಿವಾಸಕ್ಕೆ ಕುಟುಂಬ ಸಮೇತರಾಗಿ ಆಗಮಿಸುವಂತೆ ಪೂವಮ್ಮ ಅವರಿಗೆ ಆಹ್ವಾನ ನೀಡಿದರು.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 181,